ಸಂಪುಟ : 9 ಸಂಚಿಕೆ 159 ಪುಟ : 4 ಬೆಲೆ: 3.00 ಮಂಗಳವಾರ ಜುಲೈ 30 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 159 Pages : 4 Price : 3.00 Tuesday July 30 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜು.30-7-2024 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ

ವಾರ್ಡ್ ನಂ. 22 ದೊಡ್ಡ ಮಸೂತಿ ಭಾಗ 2000, 1600, 1400, 1800, 650 ಮನೆಗಳ ಲೈನ್, ಬಸ್ ಸ್ಟಾಪ್ ಲೈನ್, ದೊಡ್ಡ ಮಸೂತಿ ಹಿಂದಿನ ಭಾಗಗಳು. ವಾರ್ಡ್ ನಂ. 7 ಪುಲಕೇಶಿ ರೋಡ್, ಕಿಲ್ಲಾ, ಬಾರಕೇರ, ಬಾಗಲಕೋಟಿಯವರ ಲೈನ್, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 19, 24, 25 ಕುರುಬರ ಗರಡಿ, ಕೊಪ್ಪದವರ ಲೈನ್, ಹಾಳದಿಬ್ಬ 3 ಭಾಗಗಳು, ಜಿ ಎಸ್ ಹಿರೇಮಠ, ಮದ್ಲಿ ಓಣಿ, ಜೀರ ಓಣಿ, ಹನುಮಾನ ಗರಡಿ, ವಿಭೂತಿ ಓಣಿ, ಕೋಟಿಯವರ ಲೈನ್, ಮುನಸಿ ಪ್ರೆಸ್, ಮಾಬು ಸುಬಾನಿ ಕಟ್ಟಿ, ಗಣಪತಿ ಗುಡಿ, ಖಾನ ತೋಟ 3 ಭಾಗಗಳು.

ವಾರ್ಡ್ ನಂ. 11, 12 ಗಣಪತಿ ಕಟ್ಟಿ, ಕರಿಯಮ್ಮ ಕಲ್ಲು, ಹನುಮಂತ ದೇವರ ಗುಡಿ ಲೈನ್, ಪಿ ಅಂಡ್ ಟಿ ಕ್ವಾಟರ್ಸ್, ಗಾರ್ಡನ್ ಭಾಗ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 14 ಟ್ಯಾಗೋರ ರೋಡ್, ಕುರುಡಗಿ ಲೈನ್, ಜನತಾ ಗೂಡೌನ, ಕೊಣ್ಣೂರ ಬಿ ಕೆ ಮಾಸ್ತರ್ ಲೈನ್, ಹೊಸಮನಿಯವರ ಲೈನ್, ವಿ ಡಿ ಎಸ್ ಟಿ ಕಾಂಪೌಂಡ್ ಲೈನ್, ಕಟ್ಟಿಮನಿಯವರ ಲೈನ್, ಮುದುಗಲ್ಲ ಕೆ ಸಿ ರಾಣಿ ರೋಡ್, ಹಾದಿಮನಿಯವರ ಲೈನ್, ರೊಟ್ಟಿಯವರ ಲೈನ್, ಪೊಲೀಸ್ ಕ್ವಾಟರ್ಸ್, ಭಾಂಡಗೆ ಲೈನ್, ಸೋನಿಯವರ ಲೈನ್, ವಿಜಯಶೆಟ್ಟರ್ ಲೈನ್, ಪತ್ತೆಪುರ ಲೈನ್, ಹೆಡ್ ಪೋಸ್ಟ್ ಆಫೀಸ್ ಲೈನ್, ಕಾರಂತರವರ ಲೈನ್, ಮುಳಗುಂದ ಲೈನ್, ವಕೀಲರ ಚಾಳ, ಸಂಕನೂರ ಶಾಲೆಯ ಲೈನ್ ಉಳಿದ ಭಾಗಗಳು.

ವಾರ್ಡ್ ನಂ. 12, 13 ಆನಂದರವರ ಲೈನ್, ಗೂಟೂರ ಲೈನ್, ಟೋಪಿಯವರ ಲೈನ್, ಅಗಸರ, ಜಾಧವರ, ಮುಧೋಳರವರ, ಮಾಲಿಪಾಟೀಲರ ಲೈನ್, ಜೆ ಟಿ ಕಾಲೇಜ್, ಗಣಪತಿ ಗುಡಿ ಹಿಂದಿನ ಭಾಗ, ಉಳಿದ ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿವಾನುಭವಗೋಷ್ಠಿ ಇಂದು

■ ವಿಜಯಸಾಕ್ಷಿ ಸುದ್ದಿ, ನರೇಗಲ್

ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠ, ಅಕ್ಷರ ಭಾರತ ಪ್ರತಿಷ್ಠಾನ ಗದಗ ಹಾಗೂ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ ಇವುಗಳ ಸಂಯುಕ್ತ ಆಶ್ರಯದಲ್ಲಿ 52ನೇ ಶಿವಾನುಭವ ಗೋಷ್ಠಿಯು ಜುಲೈ 30ರಂದು ಸಂಜೆ 6.30ಕ್ಕೆ ಇಲ್ಲಿನ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ಜರುಗಲಿದೆ ಎಂದು ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಶಿವಾನುಭವ ಗೋಷ್ಠಿಯ ದಿವ್ಯ ಸಾನ್ನಿಧ್ಯವನ್ನು ಹಾಲಕೆರೆಯ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ವಹಿಸಲಿದ್ದಾರೆ.

ಉಪನ್ಯಾಸಕರಾಗಿ ಶಿರಹಟ್ಟಿಯ ಎಫ್.ಎಂ. ಡಬಾಲಿ ಪದವಿಪೂರ್ವ ಮಹಾವಿದ್ಯಾಲಯದ ಉಪನ್ಯಾಸಕಿ ಸುಧಾ ಹುಚ್ಚಣ್ಣವರ ಆಗಮಿಸಿ, ವಿದ್ಯಾರ್ಥಿ ಜೀವನದಲ್ಲಿ ಆಧ್ಯಾತ್ಮ ಎನ್ನುವ ವಿಷಯದ ಬಗ್ಗೆ ಉಪನ್ಯಾಸ ನೀಡಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

### ಪ್ರೌಢಶಾಲಾ ಹಾಗೂ ಪದವಿಪೂರ್ವ ಕಾಲೇಜು ಮುಖ್ಯಸ್ಥರ ಶೈಕ್ಷಣಿಕ ಪ್ರಗತಿ ಪರಿಶೀಲನಾ ಸಭೆ

## ಗುಣಾತ್ಮಕ ಶಿಕ್ಷಣದಿಂದ ಫಲಿತಾಂಶ ಸುಧಾರಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗುಣಮಟ್ಟದ ಶಿಕ್ಷಣದಿಂದ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಫಲಿತಾಂಶಗಳನ್ನು ಉನ್ನತಮಟ್ಟಕ್ಕೆ ಕೊಂಡೊಯ್ಯಬೇಕು. ಈ ನಿಟ್ಟಿನಲ್ಲಿ ಶಾಲೆ-ಕಾಲೇಜುಗಳ ಮುಖ್ಯಸ್ಥರೊಂದಿಗೆ ಶಾಲಾ-ಕಾಲೇಜುಗಳಲ್ಲಿನ ಮೂಲಭೂತ ಸೌಲಭ್ಯಗಳ ಚರ್ಚೆ ಹಾಗೂ ಗುಣಮಟ್ಟದ ಶಿಕ್ಷಣದ ವಿಚಾರ ಪ್ರಸ್ತಾಪ ಮಾಡುವ ಮೂಲಕ ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಹಾಗೂ ಪದವಿ ಪೂರ್ವಕಾಲೇಜುಗಳ ಪರೀಕ್ಷಾ ಫಲಿತಾಂಶ ಸುಧಾರಿಸಿ ಮಾನವ ಸೂಚ್ಯಂಕ ಉನ್ನತೀಕರಿಸಲು ಸಾಧ್ಯವಾಗಲಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.



ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸೋಮವಾರ ಪ್ರೌಢಶಾಲಾ ಹಾಗೂ ಪದವಿಪೂರ್ವ ಕಾಲೇಜು ಮುಖ್ಯಸ್ಥರ ಶೈಕ್ಷಣಿಕ ಪ್ರಗತಿ ಪರಿಶೀಲನಾ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸಕ್ತ ವರ್ಷದ ಶೈಕ್ಷಣಿಕ ಪ್ರಾರಂಭದ ಹಂತದಲ್ಲಿಯೇ ಮಹತ್ವದ ಬದಲಾವಣೆಗಳನ್ನು ಮಾಡುವ ಮೂಲಕ ಸುಧಾರಣೆಗೆ ಕ್ರಮ ವಹಿಸಬೇಕಾಗುತ್ತದೆ. ಜಿಲ್ಲೆಯಲ್ಲಿ ಶೈಕ್ಷಣಿಕ ಕ್ಷೇತ್ರದ ಸುಧಾರಣೆಗೆ ಕ್ರಮ ಕೈಗೊಳ್ಳಲು ಸಮೀಕ್ಷಾ ತಂಡವನ್ನು ದೆಹಲಿ ರಾಜ್ಯಕ್ಕೆ ಅಲ್ಲಿನ ಶೈಕ್ಷಣಿಕ ಹಾಗೂ ಮೂಲಭೂತ ಸೌಲಭ್ಯಗಳ ಸ್ಥಿತಿಗತಿಗಳ ಕುರಿತು ಅವಲೋಕಿಸಲು ಕಳುಹಿಸಲಾಗಿತ್ತು. ಜಿಲ್ಲೆಯಲ್ಲಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳ ಸ್ವಂತ ನಿವೇಶನವಿಲ್ಲದೇ ಇರುವ, ನಿವೇಶನ ಗುರುತಿಸಿದ್ದರೂ ಸ್ವಂತ ಕೊಠಡಿಗಳಿಲ್ಲದ ಹಾಗೂ ಮೂಲಭೂತ ಸೌಲಭ್ಯಗಳ ಕೊರತೆ ಇರುವ ಶಾಲೆ-ಕಾಲೇಜುಗಳ ಮಾಹಿತಿಯನ್ನು ಆಯಾ ಶಾಲಾ-ಕಾಲೇಜುಗಳ ಮುಖ್ಯಸ್ಥರು ಸ್ಪಷ್ಟವಾಗಿ ನೀಡಿದಲ್ಲಿ ಅವುಗಳನ್ನು ಸಂಗ್ರಹಿಸಿ ಸುಧಾರಣೆಗೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಸಭೆಯಲ್ಲಿ ಪ್ರೌಢಶಾಲೆ ಹಾಗೂ ಪದವಿಪೂರ್ವ ಶಾಲಾ ಮುಖ್ಯಸ್ಥರು ತಮ್ಮ ತಮ್ಮ ಶಾಲೆಯ ಸ್ವಂತ ಜಾಗದ ಸಮಸ್ಯೆ, ಕಟ್ಟಡದ ಸಮಸ್ಯೆ, ಮೂಲಭೂತ ಸೌಲಭ್ಯಗಳ ಸಮಸ್ಯೆ, ಮೈದಾನ ಸೌಲಭ್ಯ, ಬೋಧಕ ಸಿಬ್ಬಂದಿಗಳ ಕೊರತೆ ಹೀಗೆ ಹಲವು ಮಾಹಿತಿಗಳನ್ನು ಜಿಲ್ಲಾ ಉಸ್ತುವಾರಿ ಸಚಿವರ ಮುಂದಿಟ್ಟರು.

> ಶಾಲೆ, ಕಾಲೇಜುಗಳಲ್ಲಿ ಶೌಚಾಲಯಗಳ ಬಳಕೆ, ಅವುಗಳ ಸ್ವಚ್ಛತೆ ಹಾಗೂ ಸಮರ್ಪಕ ನಿರ್ವಹಣೆಯಾಗುತ್ತಿರುವ ಕುರಿತು ಶಾಲಾ ಮುಖ್ಯಸ್ಥರು ಗಮನ ಹರಿಸಬೇಕು. ನಿವೇಶನವಿಲ್ಲದ ಶಾಲೆಗಳಿಗೆ ಆಗಸ್ಟ್ ಮಾಸಾಂತ್ಯಕ್ಕೆ ನಿವೇಶನ ಗುರುತಿಸುವ ಕೆಲಸವಾಗಬೇಕು. ಅನುದಾನ ಕೊರತೆಯ ಕಾರಣದಿಂದ ಕಟ್ಟಡ ಕಟ್ಟಿಸಲು ಸಾಧ್ಯವಾಗದ ಶಾಲೆಗಳ ಕುರಿತು ಗಮನ ಹರಿಸಿ ಸೂಕ್ತ ಕ್ರಮ ಕೈಗೊಂಡು ಅಂತಹ ಶಾಲೆಗಳ ಕಟ್ಟಡ ಕಟ್ಟುವ ಕೆಲಸವನ್ನು ನವೆಂಬರ್ 14ರಂದು ಪ್ರಾರಂಭಿಸಲು ಕ್ರಮ ವಹಿಸಬೇಕು.
>
> **– ಎಚ್.ಕೆ. ಪಾಟೀಲ.**
> **ಜಿಲ್ಲಾ ಉಸ್ತುವಾರಿ ಸಚಿವರು.**

> ವಿಧಾನಪರಿಷತ್ ಸದಸ್ಯ ಎಸ್.ವಿ. ಸಂಕನೂರ ಮಾತನಾಡಿ, ಪ್ರೌಢಶಾಲೆ ಹಾಗೂ ಪಿಯು ಕಾಲೇಜುಗಳಲ್ಲಿ ಶಿಕ್ಷಕರು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡುವ ಕುರಿತು ಗಮನ ಹರಿಸಬೇಕು. ಪಿಯು ವಿದ್ಯಾರ್ಥಿಗಳ ದಾಖಲಾತಿ ಸಮರ್ಪಕವಾಗಿದ್ದು ಹಾಜರಾತಿ ಮಾತ್ರ ಕಡಿಮೆ ಇದ್ದಲ್ಲಿ ಅಂತಹ ಪಿಯು ಕಾಲೇಜುಗಳ ಮುಖ್ಯಸ್ಥರು ವಿದ್ಯಾರ್ಥಿಗಳ ಹಾಜರಾತಿಯ ಕಡೆ ನಿಗಾ ವಹಿಸಬೇಕು ಎಂದು ಸೂಚಿಸಿದರು.

▸▸ 3ನೇ ಪುಟಕ್ಕೆ

### ನಗರಾಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಸಚಿವ ಪಾಟೀಲ್ ಸೂಚನೆ

## ನಗರಾಭಿವೃದ್ಧಿ ಪ್ರಾಧಿಕಾರದಿಂದ ಸುಂದರ ನಗರ ನಿರ್ಮಾಣವಾಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರಾಭಿವೃದ್ಧಿ ಪ್ರಾಧಿಕಾರದಿಂದ ಕಾನೂನು ನಿಯಮಗಳನ್ವ, ಶಿಸ್ತು ಬದ್ಧವಾಗಿ ಸುಂದರ ಮತ್ತು ಶೋಷಣೆ ಮುಕ್ತ ನಗರ ನಿರ್ಮಾಣವಾಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್. ಕೆ.ಪಾಟೀಲ್ ಹೇಳಿದರು.

ನಗರದ ನಗರಾಭಿವೃದ್ಧಿ ಪ್ರಾಧಿಕಾರದ ಸಭಾಭವನದಲ್ಲಿ ಸೋಮವಾರ ನಗರಾಭಿವೃದ್ಧಿ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗದಗ ನಗರದ ನಿರ್ಮಾಣವು ತನ್ನದೆಯಾದ ಇತಿಹಾಸವನ್ನು ಹೊಂದಿದೆ. ನಗರಾಭಿವೃದ್ಧಿ ಪ್ರಾಧಿಕಾರದ ಮಹತ್ವದ ಮತ್ತು ಜವಾಬ್ದಾರಿ ಕೆಲಸವನ್ನು ಹೊಂದಿದೆ ಅದನ್ನು ಶಿಸ್ತಿನಿಂದ ಪಾಲಿಸಬೇಕು ಎಂದರು.

ಅಭಿವೃದ್ಧಿ ಕೆಲಸಗಳಿಗೆ ನಗರದಲ್ಲಿ ಸಾಕಷ್ಟು ಅವಕಾಶಗಳಿವೆ. ಪ್ರಾಧಿಕಾರದಿಂದ ಉತ್ತಮ ಮತ್ತು ಸೂಕ್ತ ಕೆಲಸಗಳನ್ನು ಮಾಡುವ ವ್ಯವಸ್ಥೆ ನಿರ್ಮಾಣವಾಗಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.



ನಗರದಲ್ಲಿ ಬೃಹತ್ತಾಕಾರದ ಉದ್ಯಾನವನಗಳು ನಿರ್ಮಾಣವಾಗಬೇಕು ಅದರಿಂದ ಸಾರ್ವಜನಿಕರಿಗೆ ಉಪಯೋಗವಾಗುವಂತ ಸ್ಥಳಗಳನ್ನು ಗುರುತಿಸಿ, ಸುಂದರವಾದ ಉದ್ಯಾನವನಗಳು ನಿರ್ಮಾಣಗೊಳಿಸಿ ನಗರವನ್ನು ಸುಂದರಗೊಳಿಸುವ ನಿಟ್ಟಿನಲ್ಲಿ ಪ್ರಾಧಿಕಾರ ಕಾರ್ಯಪ್ರವೃತ್ತರಾಗಬೇಕು ಎಂದರು.

ಕಾನೂನು ಬಾಹಿರವಾಗಿ ಮತ್ತು ಅವೈಜ್ಞಾನಿಕವಾಗಿ ನಿರ್ಮಾಣಗೊಳ್ಳುವ ಕಟ್ಟಡಗಳನ್ನು ಮೊದಲ ಹಂತದಲ್ಲಿಯೇ ಗುರುತಿಸಿ ಅಂತವರ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳಬೇಕು ಅಂದಾಗ ಮಾತ್ರ ವೈಜ್ಞಾನಿಕವಾಗಿ ನಗರ ಅಭಿವೃದ್ಧಿಯಾಗುತ್ತದೆ ಎಂದು ಹೇಳಿದರು. ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಎಸ್.ಸಿ. ಬೇವೂರು ಸಭೆಯ ನಡಾವಳಿಗಳನ್ನು ಸಲ್ಲಿಸಿದರು.

ಪ್ರಾಧಿಕಾರದ ಸದಸ್ಯರಾದ ಬಸವರಾಜ ಕಡೇಮನಿ ಸ್ವಾಗತಿಸಿದರು. ಸಭೆಯಲ್ಲಿ ಪ್ರಾಧಿಕಾರದ ಸದಸ್ಯರಾದ ಜಾನಕಿ ಮಲ್ಲಾಪೂರ, ಚಂದ್ರಶೇಖರ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು ಹಾಜರಿದ್ದರು.

> ನಗರದ ಭೀಷ್ಮ ಕೆರೆ ಬಹಳ ಪ್ರಾಮುಖ್ಯತೆ ಹೊಂದಿದ್ದು, ಅದನ್ನು ನಿರ್ವಹಿಸುವ ಮತ್ತು ಉತ್ತಮವಾಗಿ ಅಭಿವೃದ್ಧಿ ಪಡಿಸುವ ಕೆಲಸವಾಗಬೇಕು.
>
> **–ಅಕ್ಬರ್‌ಸಾಬ ಬಬರ್ಚಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ.**

### ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ ಅಭಿಮತ

## ಪತ್ರಿಕೆಗಳು ಶಾಸಕಾಂಗದ ತಪ್ಪುಗಳನ್ನು ತಿದ್ದುವ ಅಸ್ತ್ರವಾಗಬೇಕು

■ ವಿಜಯಸಾಕ್ಷಿ ಸುದ್ದಿ, ಗದಗ

ಪತ್ರಿಕೆಗಳು ಶಾಸಕಾಂಗ ವ್ಯವಸ್ಥೆ ಮೇಲೆ ಬಹುದೊಡ್ಡ ಪರಿಣಾಮ ಬೀರುವ ಅಸ್ತ್ರವಾಗಿವೆ. ಪತ್ರಿಕೆಗಳು ಶಾಸಕಾಂಗಕ್ಕೆ ಸರಿಯಾದ ಮಾರ್ಗದರ್ಶನ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ನಗರದ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶಾಸಕಾಂಗದ ಮೇಲೆ ಪರಿಣಾಮ ಬೀರುವ ಏಕೈಕ ರಂಗ ಪತ್ರಿಕಾರಂಗ. ಶಾಸಕಾಂಗದ ತಪ್ಪುಗಳನ್ನು ತಿದ್ದಿ ಹೇಳುವ ಅಸ್ತ್ರವಾಗಬೇಕು. ಪತ್ರಿಕೆಗಳು ಸತ್ಯವನ್ನು ಮರೆಮಾಚುವ ಕೆಲಸ ಮಾಡದೇ ಜನರ ಧ್ವನಿಯಾಗಬೇಕು. ಇಂದು ಪತ್ರಿಕೆ, ಟಿವಿ ಮಾಧ್ಯಮಗಳೊಂದಿಗೆ ಸೋಷಿಯಲ್ ಮೀಡಿಯಾ ಪ್ರಭಾವ ಬೀರುತ್ತಿದೆ. ಪತ್ರಿಕೆಗಳು ಬದಲಾವಣೆ ಮಾಡಿಕೊಳ್ಳದಿದ್ದಲ್ಲಿ ಪರಿಣಾಮ ಎದುರಿಸಬೇಕಾಗಿ ಬರಬಹುದು ಎಂದು ಎಚ್ಚರಿಸಿದರು.



ಕಾರ್ಯನಿರತ ಪತ್ರಕರ್ತರ ಸಂಘದಿಂದ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಅವರ ಸ್ಮರಣಾರ್ಥ ರಾಜ್ಯಮಟ್ಟದ ಮಹಿಳಾ ಪತ್ರಕರ್ತರಿಗಾಗಿ ಪ್ರಶಸ್ತಿ ನೀಡಲು ಸ್ಥಾಪಿಸಿರುವ ದತ್ತಿ ನಿಧಿಯ 2024ನೇ ಸಾಲಿನ ಪ್ರಶಸ್ತಿಯನ್ನು ಹಿರಿಯ ಪತ್ರಕರ್ತೆ ಕೆ.ಎಚ್. ಸಾವಿತ್ರಿ ಅವರಿಗೆ ಪ್ರದಾನ ಮಾಡಲಾಯಿತು. ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಕೆ.ಎಚ್. ಸಾವಿತ್ರಿ, ಒಬ್ಬ ಪತ್ರಕರ್ತ ಸಮಾಜದ ಕಣ್ಣಾಗಿರಬೇಕು. ಕಣ್ಣಾಗದಿದ್ದರೂ, ಕುರುಡನಾಗಬಾರದು. ಅಲ್ಲದೇ, ಬದ್ಧತೆ, ಪ್ರಾಮಾಣಿಕತೆ, ಸಹನೆ ಪ್ರಮುಖವಾಗಿ ಬೇಕಾಗುತ್ತದೆ. ಜೊತೆಗೆ ನಮ್ಮಲ್ಲಿರುವ ಮನುಷ್ಯತ್ವ, ಅಂತಃಕರಣದಿಂದ ನಾವು ಮಾಡಿದ ಕೆಲಸಗಳನ್ನು ತೃಪ್ತಿ ನೀಡುತ್ತವೆ ಎಂದು ಹೇಳಿದರು. ಸಂಘದ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿ, ಪತ್ರಿಕಾ ಭವನದಲ್ಲಿ ಕೇವಲ ಸುದ್ದಿಗೋಷ್ಠಿಗಳನ್ನು ಮಾಡಲು ಸ್ಥಳಾವಕಾಶವಿದ್ದು, ಪತ್ರಿಕಾ ಭವನದ ಮೊದಲ ಮಹಡಿಯಲ್ಲಿ ಸಭಾಭವನ ನಿರ್ಮಾಣ ಕಾಮಗಾರಿಗೆ ಅನುದಾನ ಒದಗಿಸಬೇಕು ಎಂದು ವಿನಂತಿಸಿದರು.

ಇದೇ ಸಂದರ್ಭದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದಿಂದ ದ್ವಿತೀಯ ಪಿಯುಸಿ ಅತ್ಯಧಿಕ ಅಂಕ ಗಳಿಸಿದ ಭರತ್ ಬೆಟಗೇರಿ, ಪೂಜಾ ವಗ್ಗಿ, ಫಹಮೀದಾ ಕಾಗದಗಾರ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದ ಶಿವರಾಜ ಗುರಿಕಾರ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ರಾಜ್ಯಮಟ್ಟದ ಪ್ರಶಸ್ತಿ ಪುರಸ್ಕೃತ ವೆಂಕಟೇಶ ಇಮರಾಪೂರ, ಮಾಳಿಂಗರಾಯ ಪೂಜಾರ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಗಣ್ಯರಾದ ಪ್ರಭು ಬುರಬುರೆ, ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪದಾಕರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ, ಅವ್ವ ಸೇವಾ ಟ್ರಸ್ಟ್ ಸಂಚಾಲಕ ಡಾ. ಬಸವರಾಜ ಧಾರವಾಡ, ಸಯ್ಯದ್ ಸನಾವುಲ್ಲಾ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ., ಜಿ.ಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ವಾರ್ತಾಧಿಕಾರಿ ವಸಂತ ಮಡ್ಲೂರ, ಪತ್ರಕರ್ತರು ಇದ್ದರು. ಆನಂದಯ್ಯ ವಿರಕ್ತಮಠ ಕಾರ್ಯಕ್ರಮ ನಿರೂಪಿಸಿದರು. ಮೌನೇಶ ಬಡಿಗೇರ ವಂದಿಸಿದರು

> ಅವ್ವ ಸೇವಾ ಟ್ರಸ್ಟ್ ಪತ್ರಿಕಾ ದಿನಾಚರಣೆಯ ದಿನ ಓರ್ವ ಶ್ರೇಷ್ಠ ಮಹಿಳಾ ಪತ್ರಕರ್ತರನ್ನು ಗುರುತಿಸಿ ಪ್ರಶಸ್ತಿ ಪ್ರದಾನ ಮಾಡುವ ಮೂಲಕ ಅವರನ್ನು ಗೌರವಿಸಬೇಕು ಎನ್ನುವ ಕಲ್ಪನೆ ವಿಶಿಷ್ಟವಾಗಿದೆ. ವಿಧಾನ ಪರಿಷತ್‌ನಲ್ಲಿ ಕಲಾಪಗಳಲ್ಲಿ ಮಾತನಾಡಿರುವ ಸಂದೇಶಗಳನ್ನು ಜನರಿಗೆ ಮುಟ್ಟಿಸುವಲ್ಲಿ ಪತ್ರಕರ್ತೆ ಕೆ.ಎಚ್. ಸಾವಿತ್ರಿ ಕಾರ್ಯನಿರ್ವಹಿಸಿದ್ದಾರೆ. ವಿಧಾನ ಪರಿಷತ್ತಿನ ಆಲೋಚನಾ ಪ್ರಕ್ರಿಯೆ, ರಾಜಕೀಯ ತತ್ವ-ಸಿದ್ಧಾಂತಗಳನ್ನು, ಆಲೋಚನೆಗಳನ್ನು ಜನರಿಗೆ ತಿಳಿಸುವ ಮೂಲಕ ನಮ್ಮನ್ನು ಪರಿಚಯಿಸುತ್ತಿದ್ದರು. ಅವರಿಗೆ ಇಂದು ಪ್ರಶಸ್ತಿ ಪ್ರದಾನ ಮಾಡುತ್ತಿರುವುದು ಸಂತಸದ ವಿಷಯವಾಗಿದೆ.
>
> **– ಎಚ್.ಕೆ. ಪಾಟೀಲ.**
> **ಜಿಲ್ಲಾ ಉಸ್ತುವಾರಿ ಸಚಿವರು.**

> ವಿ.ಪ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಅತ್ಯಂತ ಬಡತನದಲ್ಲಿರುವ ಹೆಣ್ಣು ಮಕ್ಕಳ ಶಿಕ್ಷಣವನ್ನು ಮುಂದುವರೆಸಲು ಅವ್ವ ಸೇವಾ ಟ್ರಸ್ಟ್ ಮೂಲಕ ಸಹಾಯ ಮಾಡಲಾಗುತ್ತಿದೆ. ಅಲ್ಲದೇ, ಹಲವೆಡೆ ಅವ್ವ ಸೇವಾ ಟ್ರಸ್ಟ್ ಮೂಲಕ ದತ್ತಿನಿಧಿ ಸ್ಥಾಪಿಸಿ ಮಹಿಳೆಯರನ್ನು ಪ್ರೋತ್ಸಾಹಿಸುವ ಕೆಲಸ ಮಾಡಲಾಗುತ್ತಿದೆ. ಇಂದಿನ ಯುವಕರು ತಮ್ಮ ತಂದೆ-ತಾಯಿಯನ್ನು ಪೂಜ್ಯ ಭಾವನೆಯಿಂದ ನೋಡಿಕೊಳ್ಳಬೇಕು. ಗೌರವಿಸುವುದನ್ನು ಕಲಿಯಬೇಕು ಎಂದರು.



## ಸಂಪಾದಕೀಯ

# ದೈಹಿಕ ಶಿಕ್ಷಣಕ್ಕೆ ಬೇಕು ಒತ್ತು

ದೈಹಿಕ ಶಿಕ್ಷಣವು ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಅತ್ಯಂತ ಮುಖ್ಯ. ಇದು ಕೇವಲ ದೈಹಿಕ ಆರೋಗ್ಯವನ್ನು ಸುಧಾರಿಸುವುದಲ್ಲದೆ, ಮಾನಸಿಕ ಆರೋಗ್ಯ, ಸಾಮಾಜಿಕ ಕೌಶಲ್ಯಗಳು ಮತ್ತು ಅರಿವಿನ ಸಾಮರ್ಥ್ಯಗಳನ್ನು ಹೆಚ್ಚಿಸುತ್ತದೆ. ದೈಹಿಕ ಚಟುವಟಿಕೆಗಳು ದೇಹದಲ್ಲಿನ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಿ, ಮಕ್ಕಳಲ್ಲಿ ಆತ್ಮವಿಶ್ವಾಸ ಮತ್ತು ಸ್ವಾಭಿಮಾನವನ್ನು ಹೆಚ್ಚಿಸುತ್ತದೆ ಮತ್ತು ಮಕ್ಕಳ ಕಲಿಕೆಯ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ.

ಆದರೆ ಇವತ್ತು ಭಾರತ ಮಾತ್ರವಲ್ಲದೇ ಜಗತ್ತಿನ ಅನೇಕ ರಾಷ್ಟ್ರಗಳು ದೈಹಿಕ ಶಿಕ್ಷಣವನ್ನು ಕಡೆಗಣಿಸುತ್ತಿದೆ. ವಿಶ್ವಸಂಸ್ಥೆಯ ವರದಿಯ ಪ್ರಕಾರ ಜಗತ್ತಿನ ಶೇ. 7ರಷ್ಟು ದೇಶಗಳು ಮಾತ್ರ ದೈಹಿಕ ಶಿಕ್ಷಣಕ್ಕೆ ಹೆಚ್ಚು ಮಹತ್ವ ನೀಡುತ್ತಿದೆ. ಈ ಅಂಕಿ ಅಂಶ ಗಮನಿಸಿದರೆ ಭವಿಷ್ಯದಲ್ಲಿ ದೈಹಿಕ ಶಿಕ್ಷಣದ ಪ್ರಮಾಣ ಮತ್ತಷ್ಟು ಕಡಿಮೆಯಾಗುವ ಸಾಧ್ಯತೆಗಳಿವೆ. ಇದಕ್ಕೆ ಹಲವಾರು ಕಾರಣಗಳಿವೆ.

ಮುಖ್ಯವಾಗಿ ಮಕ್ಕಳಿಗೆ ಪರೀಕ್ಷಾ ಫಲಿತಾಂಶಗಳ ಮೇಲೆ ಹೆಚ್ಚು ಒತ್ತಡ ಹೇರುತ್ತಿರುವುದು, ಹಲವಾರು ಶಾಲೆಗಳಲ್ಲಿ ದೈಹಿಕ ಶಿಕ್ಷಣಕ್ಕೆ ಅಗತ್ಯವಾದ ಸಾಕಷ್ಟು ಸೌಲಭ್ಯಗಳು ಇಲ್ಲದಿರುವುದು. ದೈಹಿಕ ಶಿಕ್ಷಕರ ಕೊರತೆ, ತಾಂತ್ರಿಕತೆ ಮತ್ತು ಮೊಬೈಲ್ ಹಾವಳಿಯಿಂದ ಮಕ್ಕಳ ಆಸಕ್ತಿ ಕಡಿಮೆಯಾಗುತ್ತಿರುವುದು ಸಹ ಗಮನಿಸಬೇಕಾದ ಅಂಶ.

ಶಾಲೆಗಳಲ್ಲಿ ದೈಹಿಕ ಶಿಕ್ಷಣಕ್ಕೆ ಮಹತ್ವ ದೊರೆಯಬೇಕಾದರೆ ಮುಖ್ಯವಾಗಿ ಶಾಲೆಯಲ್ಲಿ ಆಟದ ಮೈದಾನ ಕಡ್ಡಾಯವಾಗಿ ಇರಬೇಕು. ಆದರೆ ಅಂಥ ಯಾವುದೇ ಆಟದ ಮೈದಾನಗಳು ಕಾಣುತ್ತಿಲ್ಲ. ಭೂಮಿ ಬೆಲೆ ಗಗನಕ್ಕೆ ಏರಿರುತ್ತಿರುವ ಹಿನ್ನೆಲೆಯಲ್ಲಿ ಯಾವುದೇ ಶಾಲೆಯಲ್ಲಿಯೂ ದೊಡ್ಡ ಆಟದ ಮೈದಾನ ಕಾಣಲು ಸಾಧ್ಯವಿಲ್ಲ. ಶಾಲೆಗಳಲ್ಲಿ ಮೈದಾನ ಎಂದರೆ ಪ್ರಾರ್ಥನೆಗೆ ನಿಲ್ಲಲು ಬೇಕಾದ ಸ್ಥಳ ಎನ್ನುವಷ್ಟರ ಮಟ್ಟಿಗೆ ಬದಲಾಗಿದೆ. ಈ ವ್ಯವಸ್ಥೆ ಬದಲಾಗಬೇಕಾದರೆ ಮೊದಲು ಆಟದ ಮೈದಾನ ಕಲ್ಪಿಸಬೇಕು. ದೈಹಿಕ ಶಿಕ್ಷಕರ ನೇಮಕ, ಕ್ರೀಡಾ ಸೌಲಭ್ಯ, ಮಕ್ಕಳಲ್ಲಿ ಆಸಕ್ತಿ ಮೂಡಿಸುವುದು ಮತ್ತು ದೈಹಿಕ ಶಿಕ್ಷಣದ ಪಠ್ಯಕ್ರಮವನ್ನು ಆಧುನೀಕರಣವಾಗಬೇಕು.

ದೈಹಿಕ ಶಿಕ್ಷಣವು ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಅತ್ಯಂತ ಮುಖ್ಯ. ಶಾಲೆಗಳು, ಸರ್ಕಾರ ಮತ್ತು ಪೋಷಕರು ಸೇರಿಕೊಂಡು ದೈಹಿಕ ಶಿಕ್ಷಣವನ್ನು ಪ್ರೋತ್ಸಾಹಿಸುವ ಕೆಲಸ ಮಾಡಬೇಕು. ಇದರಿಂದ ಮಕ್ಕಳು ಆರೋಗ್ಯವಂತ ಮತ್ತು ಸಂತೋಷದ ಜೀವನವನ್ನು ನಡೆಸಲು ಸಾಧ್ಯವಾಗುತ್ತದೆ.

### ಎಸ್‌ಎಸ್‌ಎಲ್‌ಸಿ ಪರೀಕ್ಷೆ -3- ಪೂರ್ವಭಾವಿ ಸಭೆಯಲ್ಲಿ ಅಪರ್ ಜಿಲ್ಲಾಧಿಕಾರಿ ಅನ್ನಪೂರ್ಣ ಸೂಚನೆ

# ಪರೀಕ್ಷೆ ವ್ಯವಸ್ಥಿತವಾಗಿ ನಡೆಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಆಗಸ್ಟ್ 2ರಿಂದ 9ರವರೆಗೆ ಜರುಗುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ-3 ಯನ್ನು ವ್ಯವಸ್ಥಿತವಾಗಿ ಅಚ್ಚುಕಟ್ಟಾಗಿ ನಡೆಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ತಿಳಿಸಿದರು.



ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಎಸ್‌ಎಸ್‌ಎಲ್‌ಸಿ ಪರೀಕ್ಷೆ-3 ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷೆಗಳಲ್ಲಿ ಯಾವುದೇ ಅಕ್ರಮಗಳು ಅವ್ಯವಹಾರಗಳು ನಡೆಯದಂತೆ ನೋಡಿಕೊಳ್ಳಬೇಕು. ಜಿಲ್ಲೆಯ ಒಟ್ಟು 11 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ನಡೆಯಲಿದ್ದು, ಅಲ್ಲಿ ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲಭ್ಯಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷಾ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ನಿಷೇಧಾಜ್ಞೆ ಜಾರಿಗೊಳಿಸಲಾಗಿದ್ದು, ಪರೀಕ್ಷಾ ಅವಧಿಯಲ್ಲಿ ಯಾವುದೇ ಲೋಪ ದೋಷಗಳಾಗದಂತೆ ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ ನಿರ್ದೇಶನ ನೀಡಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ ಮಾತನಾಡಿ, ಎಸ್‌ಎಸ್‌ಎಲ್‌ಸಿ ಎಸ್‌ಎಸ್‌ಎಲ್‌ಸಿ-3 ಪರೀಕ್ಷೆಯು ಆಗಸ್ಟ್ 2 ರಿಂದ 9 ರವರೆಗೆ ಜಿಲ್ಲೆಯ 11 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿದ್ದು, ಒಟ್ಟು 1625 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸಲು ಕ್ರಮ ವಹಿಸಲಾಗಿದೆ. ಜಿಲ್ಲಾ ಕಚೇರಿಯಲ್ಲಿ ವೆಬ್‌ಕಾಸ್ಟಿಂಗ್ ಮೂಲಕ ಎಲ್ಲ ಪರೀಕ್ಷಾ ಕೇಂದ್ರಗಳ ವೀಕ್ಷಣೆ ಮಾಡುವ ವ್ಯವಸ್ಥೆಯನ್ನು ಮಾಡಲಾಗಿದೆ. ಎಲ್ಲ ತಾಲೂಕಿನ ಬಿ.ಇ.ಓ ಕಚೇರಿಯಲ್ಲಿ ಸಹ ಸದರಿ ವ್ಯವಸ್ಥೆಯನ್ನು ಮಾಡಲಾಗಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತ ಸೂಕ್ತ ಪೊಲೀಸ್ ಬಂದೋಬಸ್ತ್, ಮಾರ್ಗಾಧಿಕಾರಿಗಳ ವಾಹನ ವ್ಯವಸ್ಥೆ , ತುರ್ತು ಆರೋಗ್ಯ ತಪಾಸಣೆಗೆ ಸೂಕ್ತ ವ್ಯವಸ್ಥೆ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಜಿ.ಪಂ. ಮುಖ್ಯ ಯೋಜನಾಧಿಕಾರಿ ನಿರ್ಮಲಾ, ಡಯಟ್ ಪ್ರಾಚಾರ್ಯರಾದ ಜಿ.ಎಲ್. ಬಾರಾಟಕ್ಕೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

**ಎಸ್‌ಎಸ್‌ಎಲ್‌ಸಿ ಪರೀಕ್ಷೆ- 3ರ ವೇಳಾಪಟ್ಟಿ**

ಆಗಸ್ಟ್ 2 -ಪ್ರಥಮ ಭಾಷೆ - ಬೆ10.15 ರಿಂದ ಮ 1.30 ರವರೆಗೆ, ಆ. 3-ತೃತೀಯ ಭಾಷೆ - ಬೆ 10.15 ರಿಂದ ಮ. 1.15 ರವರೆಗೆ / ಎಸ್‌ಎಸ್‌ಕ್ಯೂಎಫ್ ವಿಷಯಗಳು - ಬೆ 10.15 ರಿಂದ ಮ.12.30 ಗಂಟೆಗೆ, ಆ. 5- (ಕೋರ್ ಸಬ್ಜೆಕ್ಟ್ )ವಿಜ್ಞಾನ, ರಾಜ್ಯ ಶಾಸ್ತ್ರ ಬೆ 10.15 ರಿಂದ ಮ. 1.30 ರವೆಗೆ, ಹಿಂದೂಸ್ಥಾನಿ ಸಂಗೀತ, ಕರ್ನಾಟಕ ಸಂಗೀತ, ಕರ್ನಾಟಕ ಸಂಗೀತ/ಹಿಂದೂಸ್ಥಾನಿ ಸಂಗೀತ- ಮಧ್ಯಾಹ್ನ 2 ಗಂಟೆಯಿಂದ ಸಂಜೆ 5.15 ರವರೆಗೆ, ಆಗಸ್ಟ್ 6- (ಕೋರ್ ಸಬ್ಜೆಕ್ಟ್) ಸಮಾಜ ವಿಜ್ಞಾನ- ಬೆ 10.15 ರಿಂದ ಮ. 1.30 ರವರೆಗೆ, ಆ. 7 ಇಂಗ್ಲೀಷ್, ಕನ್ನಡ - ಬೆ 10.15 ರಿಂದ ಮ. 1.15 ರವರೆಗೆ, ಅಗಸ್ಟ 8- ( ಕೋರ್ ಸಬ್ಜೆಕ್ಟ್ ), ಗಣಿತ, ಸಮಾಜ ಶಾಸ್ತ್ರ - ಬೆ 10.15 ರಿಂದ ಮ. 1.30 ರವರೆಗೆ.

# ವೀರಶೈವ ಸಮಾಜ ಶಕ್ತಿಯಾಗಿ ಹೊರಹೊಮ್ಮಲಿ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ವೀರಶೈವ ಸಮಾಜದ ಒಳ ಪಂಗಡಗಳನ್ನು ಒಗ್ಗೂಡಿಸಿಕೊಂಡು ಸಮಾಜದ ಏಳ್ಗೆಗಾಗಿ ವೀರಶೈವ ಮಹಾಸಭಾ ಶ್ರಮಿಸುತ್ತಿದೆ ಎಂದು ತೆಗ್ಗಿನಮಠದ ಪೀಠಾಧ್ಯಕ್ಷ ವರಸದ್ಯೋಜಾತ ಶಿವಾಚಾರ್ಯ ಸ್ವಾಮೀಜಿ ತಿಳಿಸಿದರು.



ಪಟ್ಟಣದ ಕೆಂಪೇಶ್ವರ ಮಠದ ಆವರಣದಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ಆಯೋಜಿಸಿದ್ದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಎಲ್ಲ ಸಮುದಾಯಗಳನ್ನು ಒಗ್ಗೂಡಿಸಿಕೊಂಡು ಹೋಗುವ ಮನೋಭಾವ ಉಳ್ಳವರು ಸಂಘಟನೆ ಯಶಸ್ವಿಯಾಗಿ ಮುನ್ನಡೆಸುತ್ತಾರೆ. ವೀರಶೈವ ಸಮಾಜ ಗಟ್ಟಿಯಾದ ಶಕ್ತಿಯಾಗಿ ಹೊರಹೊಮ್ಮಬೇಕು. ಸರ್ಕಾರಿ ಸವಲತ್ತು ಪಡೆಯುವಲ್ಲಿ ವೀರಶೈವ ಸಮಾಜ ವಿಫಲವಾಗಿದೆ. ಸಮಾಜವು ವಿಶ್ವವೇ ಒಂದು ಎನ್ನುವ ತತ್ವವನ್ನು ಹೊಂದಿದ್ದು, ತಾಯಿಯ ಗರ್ಭಧಾರಣೆ ಆಗಿ 8 ತಿಂಗಳಲ್ಲಿಯೇ ಮಗುವಿಗೆ ಲಿಂಗಾದಾರಣೆ ಮಡುವುದು ನಮ್ಮ ಸಮಾಜದ ವಿಶೇಷ, ಆದರೆ ಇಂದು ಲಿಂಗಾಧಾರಣೆ ಮಾಡಿಕೊಳ್ಳಲು ಸಂಕುಚಿತ ಮನೋಭಾವ ತೋರಿಸುತ್ತಿರುವುದು ಸರಿಯಾದ ನಡೆಯಲ್ಲ ಎಂದರು.

ವೀರಶೈವ ಸಮಾಜದ ತಾಲೂಕಾಧ್ಯಕ್ಷ ಎಂ.ರಾಜಶೇಖರ ಮಾತನಾಡಿ, ವೀರಶೈವ ಮಹಾಸಭಾ ಕೇವಲ ಸಂಘಟನೆಯಲ್ಲ, ಅದೊಂದು ಶಕ್ತಿಯಾಗಿದೆ. ವೀರಶೈವ ಸಮಾಜದ ಎಲ್ಲ ವರ್ಗಗಳಿಗೂ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ ಎಂದರು.

ಟಿ.ಎಂ. ಚಂದ್ರಶೇಖರಯ್ಯ, ಹುಳ್ಳಿ ಕೊಟ್ರೇಶಪ್ಪ, ಕೆ.ಎಂ. ಕೊಟ್ರಯ್ಯ, ಸಂಘದ ಸದಸ್ಯರಾದ ಎಲ್.ಕೊಟ್ರೇಶಪ್ಪ, ಸಿ.ಎಂ. ಕೊಟ್ರಯ್ಯ, ಎಚ್.ಎಂ. ಜಗದೀಶ, ಶಿವಾನಂದಪ್ಪ, ದೊಡ್ಡ ಬಸವರಾಜ , ಶಿವಕುಮಾರಸ್ವಾಮಿ, ಪಿ.ಬಿ. ಗೌಡ, ಬಸಯ್ಯ ವಕೀಲ, ಮಲ್ಲಿಕಾರ್ಜುನ ಸ್ವಾಮಿ, ಅನುರಾಧ, ನಂದಿನಿ, ಪ್ರಬಾ ಅಜ್ಜಣ್ಣ, ವೀಣಾ, ಸುಮ, ಅಕ್ಷಯ್ ಕುಮಾರ ಇತರರಿದ್ದರು.

# ಪತ್ರಕರ್ತ ಚೂಡಾನಾಥ ಐಯ್ಯರ್ ಅಗಲಿಕೆಗೆ ಶ್ರೀ ರಂಭಾಪುರಿ ಜಗದ್ಗುರುಗಳ ಸಂತಾಪ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು



ಹಿರಿಯ ಪತ್ರಕರ್ತ ಚೂಡಾನಾಥ ಐಯ್ಯರ್ ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ.

ಐದು ದಶಕಗಳಿಂದ ಚಿಕ್ಕಮಗಳೂರಿನಲ್ಲಿ ಪತ್ರಕರ್ತರಾಗಿ ಸಲ್ಲಿಸಿರುವ ಚೂಡಾನಾಥ ಐಯ್ಯರ್ ಅವರು ತಮ್ಮ ತೀಕ್ಷ್ಣ ಬರಹಗಳಿಂದ ಸಮಾಜದ ಓರೆ-ಕೋರೆಗಳನ್ನು ತಿದ್ದುವಲ್ಲಿ ಪ್ರಮುಖ ಪಾತ್ರ ವಹಿಸಿದ್ದನ್ನು ಮರೆಯಲಾಗದು. ಶ್ರೀ ಜಗದ್ಗುರು ರಂಭಾಪುರಿ ಪೀಠದ ಕುರಿತು ಅವರು ಉತ್ತಮ ವರದಿಗಳನ್ನು ಮಾಡಿದ್ದರು. ಇತ್ತೀಚೆಗೆ ಅವರಿಗೆ ಚಿಕ್ಕೊಳಲೆ ಸದಾಶಿವ ಪತ್ರಿಕೋದ್ಯಮ ಪ್ರಶಸ್ತಿ ನೀಡಿ ಆಶೀರ್ವದಿಸಿದ ನೆನಪು ಇನ್ನೂ ಹಸಿರಾಗಿದೆ.

ಶ್ರೀ ಜಗದ್ಗುರುಗಳೊಂದಿಗೆ ಉತ್ತಮ ಬಾಂಧವ್ಯವನ್ನು ಹೊಂದಿದ್ದ ಅವರ ಅಗಲಿಕೆ ನೋವನ್ನುಂಟು ಮಾಡಿದೆ. ಅಗಲಿದ ಅವರ ಪವಿತ್ರ ಆತ್ಮಕ್ಕೆ ದಯಾಘನನಾದ ಪರಮಾತ್ಮನು ಚಿರಶಾಂತಿ ನೀಡಲಿ. ಅವರ ಅಗಲಿಕೆಯ ನೋವನ್ನು ಸಹಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ನೀಡಲಿ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ತಮ್ಮ ಸಂತಾಪ ಸೂಚಕ ಸಂದೇಶದಲ್ಲಿ ತಿಳಿಸಿದ್ದಾರೆ.

# ಸಂಗೀತ ಪರೀಕ್ಷೆ ಗದುಗಿನಲ್ಲೇ ನಡೆಯಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಂಗೀತ ಕ್ಷೇತ್ರದಲ್ಲಿ ಹೆಸರುವಾಸಿಯಾಗಿರುವ ಗದಗ ಜಿಲ್ಲೆ ವಿಶೇಷವಾಗಿ ಲಿಂಗೈಕ್ಯ ಡಾ. ಪಂಡಿತ ಪುಟ್ಟರಾಜರ ಶರಣರು, ಪುಣ್ಯಾಶ್ರಮ ಸಂಸ್ಥೆಯ ವತಿಯಿಂದ ನಡೆಯುತ್ತಿರುವ ಸಂಗೀತ ಶಾಲೆಯಲ್ಲಿ ನೂರಾರು ಅಂಧ-ಅನಾಥ ಮಕ್ಕಳು ಆಶ್ರಯ ಪಡೆದು ಸಂಗೀತದ ವಿದ್ಯೆಯನ್ನು ಪಡೆದುಕೊಂಡು ತಮ್ಮ ಜೀವನದ ರೂಪಿಸಿಕೊಳ್ಳುತ್ತಿದ್ದರು.

ಶ್ರೀ ಮಠದ ವತಿಯಿಂದ ನೂರಾರು ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದರು. ಆದರೆ ಈ ವರ್ಷದಿಂದ ಸಂಗೀತದ ಪರೀಕ್ಷೆಯನ್ನು ಬೇರೆ ಜಿಲ್ಲೆಯ ಕೇಂದ್ರಗಳಲ್ಲಿ ನಡೆಸುತ್ತಿರುವುದು ಇಲ್ಲಿಯ ಅನಾಥ ಮಕ್ಕಳಿಗೆ ಮಾಡಿದ ಅನ್ಯಾಯವಾಗಿದೆ. ಕಾರಣ, ರಾಜ್ಯ ಸರ್ಕಾರ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲರು ಈ ಬಗ್ಗೆ ಗಮನವಹಿಸಿ ಅಂಧ-ಅನಾಥ ಮಕ್ಕಳಿಗೆ ತೊಂದರೆ-ಯಾಗದಂತೆ ಪರೀಕ್ಷಾ ಕೇಂದ್ರವನ್ನು ಈ ಮೊದಲಿನಂತೆ ಗದಗ ಜಿಲ್ಲಾ ಕೇಂದ್ರದಲ್ಲಿಯೇ ನಡೆಸಬೇಕು ಎಂದು ಜೆಡಿಎಸ್ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹಾಜಿಅಲಿ ಎಚ್.ಕೊಪ್ಪಳ ಪತ್ರಿಕಾ ಪ್ರಕಟಣೆ ಮೂಲಕ ವಿನಂತಿಸಿದ್ದಾರೆ.



■ವಿಜಯಸಾಕ್ಷಿ ಸುದ್ದಿ, ಗದಗ

1971ರ ಇಂಡೋ-ಪಾಕ್ ಯುದ್ಧದಲ್ಲಿ ಸೇವೆಗೈದ ಬೆಟಗೇರಿಯ ನಿವೃತ್ತ ಯೋಧರಾದ 74 ವರ್ಷದ ಸುಭಾಸಚಂದ್ರ ಬಾಗರೆ ಅವರನ್ನು ಕಾರ್ಗಿಲ್ ವಿಜಯ ದಿವಸ್ ನಿಮಿತ್ತ ಸನ್ಮಾನಿಸಲಾಯಿತು. ಬಿಜೆಪಿ ಯುವ ಮೋರ್ಚಾ ವತಿಯಿಂದ ಶಾಲು ಹೊದಿಸಿ, ಸಿಹಿ ತಿನಿಸಿ ಪುಸ್ತಕ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ ಮಲ್ಲಾಪೂರ, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಸಂತೋಷ ಅಕ್ಕಿ, ಕಿರಣ ಕಲಾಲ, ಶಶಿಧರಗೌಡ ಕಳ್ಳಿ ಇದ್ದರು.



■ವಿಜಯಸಾಕ್ಷಿ ಸುದ್ದಿ,ಗದಗ

ಇಲ್ಲಿನ ಜಗದ್ಗುರು ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ಕಲಾಚೇತನ ಸಾಂಸ್ಕೃತಿಕ ಆಕಾಡೆಮಿ ವತಿಯಿಂದ ಜರುಗಿದ 'ಯಕ್ಷ ಸಂಭ್ರಮ' ಕಾರ್ಯಕ್ರಮದಲ್ಲಿ ಹಾಲಾಡಿಯ ಮಹಾಗಣಪತಿ ಪ್ರವಾಸಿ ಯಕ್ಷಗಾನ ಮಂಡಳಿ ವತಿಯಿಂದ ಕೀಚಕ ವಧೆ ಮತ್ತು ಭಾರತ ರತ್ನ ಯಕ್ಷಗಾನ ಪ್ರದರ್ಶನ ಜನಮನಸೂರೆಗೊಂಡಿತು.

# ಸುಲಭ ಶೌಚಾಲಯ ಸಂಕೀರ್ಣ ಉದ್ಘಾಟಿಸಿದ ಸಚಿವ ಪಾಟೀಲ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ಭಾರತೀಯ ರೈಲ್ವೇ ಇಲಾಖೆಯ ಸಿ.ಎಸ್.ಆರ್ ಅನುದಾನದಿಂದ ರೂ 30ಲಕ್ಷ ವೆಚ್ಚದಲ್ಲಿ ಕರ್ನಾಟಕ ಶಾಖೆಯ ಅಂತಾರಾಷ್ಟ್ರೀಯ ಸುಲಭ ಸಮಾಜ ಸೇವಾ ಸಂಸ್ಥೆ ಬೆಂಗಳೂರು ಅವರಿಂದ ನಿರ್ಮಿಸಿದ ಸುಲಭ ಶೌಚಾಲಯ ಸಂಕೀರ್ಣವನ್ನು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ.ಪಾಟೀಲ್ ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಜಿಮ್ಸ್ ನಿರ್ದೇಶಕ ಬಸವರಾಜ ಬೊಮ್ಮನಹಳ್ಳಿ, ವೈದ್ಯಕೀಯ ಅಧೀಕ್ಷರಾದ ಡಾ.ರೇಖಾ ಸೋನಾವನೆ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಸನಗೌಡ ಕರಿಗೌಡರ, ಅಂತಾರಾಷ್ಟ್ರೀಯ ಸುಲಭ ಸಮಾಜ ಸೇವಾ ಸಂಸ್ಥೆ ಕರ್ನಾಟಕ ಶಾಖೆಯ ಅಧ್ಯಕ್ಷ ಮಳಗೆ ವಿಶ್ವನಾಥ, ಸ್ವಚ್ಛತಾ ವ್ಯವಸ್ಥಾಪಕ ಮಲ್ಲಪ್ಪ. ಬಿ. ಜಿಮ್ಸ್ ವೈದ್ಯರು ಮತ್ತು ಸಿಬ್ಬಂದಿ ಹಾಜರಿದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಅಪರ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಯನ್ನು ಕರ್ನಾಟಕ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತುಗಳು )ನಿಯಮಗಳ ಅನ್ವಯ ಅಭ್ಯರ್ಥಿಯಿಂದ ತುಂಬಲು 10 ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಆಗಸ್ಟ್ 10 ರೊಳಗೆ ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ಕಚೇರಿ ವೇಳೆಯಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ ಎಂದು ಗದಗ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# ಎಸ್‌ಎಸ್‌ಕೆ ಸಮಾಜದ ವಿಶೇಷ ಮಹಾಸಭೆ




■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ ಸಮಾಜ, ಶ್ರೀ ಅಂಬಾಭವಾನಿ ದೇವಸ್ಥಾನ ಪಂಚ ಕಮೀಟಿ ಗದಗ, ಶ್ರೀ ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ ಸಮಾಜ, ಶ್ರೀ ತುಳಜಾಭವಾನಿ ದೇವಸ್ಥಾನ ಪಂಚ ಕಮೀಟಿ ಗದಗ, ಶ್ರೀ ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ ಸಮಾಜ, ಗದಗ-ಭದ್ರಾಪೂರ, ಶ್ರೀ ಜಗದ್ಗುರು 1008 ಶ್ರೀ ವಿಠ್ಠಲಾರೂಢಸ್ವಾಮಿ ಗುರುನಿರಂಜನ, ಸ್ವಾಮಿ ಸಂಸ್ಥಾನಮಠ ಪಂಚ ಕಮಿಟಿ ಗದಗ ಇವುಗಳ ವಿಶೇಷ ಮಹಾಸಭೆ ಇತ್ತೀಚೆಗೆ ಜರುಗಿ-ತು. ಸಭೆಯ ಅಧ್ಯಕ್ಷತೆಯನ್ನು ಸಮಾಜದ ಅಧ್ಯಕ್ಷರಾದ ಫಕೀರಸಾ ಬಾಬಾಸಾ ಭಾಂಡಗೆ ವಹಿಸಿದ್ದರು.


ಸಭೆಯಲ್ಲಿ ಉಪಾಧ್ಯಕ್ಷರಾದ ರಾಜು ಬದಿ, ಗೌ.ಕಾರ್ಯದರ್ಶಿ ವಿನೋದ್ ಶಿದ್ಲಿಂಗ್, ಸಹ ಕಾರ್ಯದರ್ಶಿ ರವಿ ಶಿದ್ಲಿಂಗ್ ಸೇರಿದಂತೆ ಆಡಳಿತ ಮಂಡಳಿಯ ಸದಸ್ಯರು, ಸಮಾಜದ ಸದಸ್ಯರು ಭಾಗವಹಿಸಿದ್ದರು.

### ನರೇಗಲ್ ಪಟ್ಟಣ ಅಭಿವೃದ್ಧಿ ಸಮಿತಿ ಉದ್ಘಾಟಿಸಿದ ಜಗದೀಶ ಅಮಾತಿಗೌಡ್ರ

# ಪಟ್ಟಣದ ಅಭಿವೃದ್ಧಿ ರಾಜ್ಯಕ್ಕೆ ಮಾದರಿಯಾಗಲಿ

■ವಿಜಯಸಾಕ್ಷಿ ಸುದ್ದಿ, ನರೇಗಲ್

ನರೇಗಲ್ ಪಟ್ಟಣವು ಎಲ್ಲ ದೃಷ್ಟಿಯಿಂದಲೂ ಅಭಿವೃದ್ಧಿ ಕಾಣಲಿ. ಈ ಅಭಿವೃದ್ಧಿ ರಾಜ್ಯಕ್ಕೆ ಮಾದರಿಯಾಗುವಂತಿರಬೇಕು. ಇಂದು ಉದ್ಘಾಟನೆಗೊಂಡ ನರೇಗಲ್ ಪಟ್ಟಣ ಅಭಿವೃದ್ಧಿ ಸಮಿತಿ ಆ ದಿಸೆಯಲ್ಲಿ ಶ್ರಮಿಸಲಿ ಎಂದು ಜನನಿ ಸಂಘಟನೆಯ ಜಗದೀಶ ಅಮಾತಿಗೌಡ್ರ ಹೇಳಿದರು.




ಪಟ್ಟಣದಲ್ಲಿ ನರೇಗಲ್ ಪಟ್ಟಣ ಅಭಿವೃದ್ಧಿ ಸಮಿತಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ನಮ್ಮಲ್ಲಿ ಒಗ್ಗಟ್ಟು ಇದ್ದರೆ ಏನನ್ನಾದರೂ ಸಾಧಿಸಬಹುದು. ಕೇಂದ್ರ ಸರಕಾರ ಮತ್ತು ರಾಜ್ಯ ಸರಕಾರದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವ 1000ಕ್ಕೂ ಹೆಚ್ಚಿನ ಯೋಜನೆಗಳಿವೆ. ಇವುಗಳನ್ನು ಅವರಿಗೆ ತಲುಪಿಸುವ ಕೆಲಸವನ್ನು ಮಾಡಬೇಕು. ಎಲ್ಲ ವ್ಯವಸ್ಥೆಗಳಲ್ಲಿಯೂ ಭ್ರಷ್ಟಾಚಾರ ಹೆಚ್ಚಾಗಿದ್ದು, ಅದನ್ನು ತಡೆದು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ದೃಷ್ಟಿಯಿಂದಲೂ ಈ ಸಮಿತಿ ತನ್ನ ಕಾರ್ಯ ಮಾಡಬೇಕೆಂದು ಅಮಾತಿಗೌಡ್ರ ಹೇಳಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಆಶೀರ್ವಚನ ನೀಡಿ, ಪಟ್ಟಣದ ಅಭಿವೃದ್ಧಿ ದೃಷ್ಟಿಯಿಂದ ಅಸ್ತಿತ್ವಕ್ಕೆ ಬಂದಿರುವ ಈ ಸಮಿತಿ ತನ್ನ ಗುರಿಯನ್ನು ಸಾಧಿಸುವತ್ತ ದಿಟ್ಟ ಹೆಜ್ಜೆಯನ್ನಿಡಲಿ. ಸಾಮೂಹಿಕ ಸಂಘಟನೆಯಿಂದ ಏನನ್ನಾದರೂ ಸಾಧಿಸಲು ಸಾಧ್ಯ. ವ್ಯಕ್ತಿ ಸುಧಾರಣೆಯಾದರೆ ಸಮಾಜ ತಾನೇ ತಾನಾಗಿ ಸುಧಾರಣೆಯಾಗುತ್ತದೆ ಎಂದರು.

ಸಮಿತಿಯ ಅಧ್ಯಕ್ಷ ಶಿವನಗೌಡ ಪಾಟೀಲ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಗೀತಾ ಭೋಪಳಾಪುರ ಪ್ರಾರ್ಥಿಸಿದರು. ಜಗದೀಶ ಸಂಕನಗೌಡ್ರ ಸ್ವಾಗತಿಸಿದರು. ಉಮೇಶಗೌಡ ಪಾಟೀಲ ನಿರೂಪಿಸಿದರು. ಶರಣಪ್ಪ ಧರ್ಮಾಯತ ವಂದಿಸಿದರು.

ಸಭೆಯಲ್ಲಿ ಚಂದ್ರಾಮ ಗ್ರಾಮಪುರೋಹಿತ, ಮಲ್ಲನಗೌಡ ಪಾಟೀಲ, ಮಲ್ಲಿಕಾರ್ಜುನ ಮಲ್ಲನಗೌಡ, ಶಿವಪುತ್ರಪ್ಪ ಸಂಗನಾಳ, ಪ್ರಭುಗೌಡ ನಾಡಗೌಡ್ರ, ಕಳಕಪ್ಪ ಕುರಿ, ರವಿಕುಮಾರ ಮ್ಯಾಗೇರಿ, ಕುಬೇರಪ್ಪ ಕುರಿ, ಬಾಳಪ್ಪ ಸೋಮಗೊಂಡ, ಆನಂದ ನರೇಗಲ್ಲ, ವಂಕಲಕುಂಟಿ ಸಿ.ವಿ, ಲಿಂಗರಾಜ ಭೋಪಳಾಪೂರ, ಶಿವನಗೌಡ ಕಡದಳ್ಳಿ, ಶಿವಪ್ಪ ಗುಡಿ, ಶಾಂತಪ್ಪ ಚಿಕ್ಕೊಪ್ಪದ, ಶಿವಕುಮಾರ ಮಾವಿನಕಾಯಿ, ದಾದಾಸಾಬ ನದಾಫ್, ಅರ್ಚನಾ ಕೊಂಡಿ, ಶಸಿಕಲಾ ರಾಠೋಡ, ಕಳಕನಗೌಡ ಪೊಲೀಸ್‌ಪಾಟೀಲ, ಶರಣಪಪ ಗಂಗರಗೊಂಡ, ಶೇಕಪ್ಪ ಕೆಂಗಾರ, ಎಂ.ಎಂ. ಶಿವಶಿಂಪ್ರ, ನವೀನ ಗುರುವಡೆಯರ, ಶಿವಾನಂದ ಇಟಗಿ, ಫಕೀರಯ್ಯ ಹಿರೇಮಠ, ಎನ್.ಎಸ್. ಕನಕೇರಿ, ಎಸ್.ವಿ. ಲಕ್ಕನಗೌಡ್ರ, ಜಿ.ವಿ. ಗೊಡಚಪ್ಪನವರ, ಜಗದೀಶ ಸಂಕನಗೌಡ್ರ, ಅರುಣ ಬಿ.ಕುಲಕರ್ಣಿ, ಈಶ್ವರ ಬೆಟಗೇರಿ, ಚನ್ನಪ್ಪ ಹೊನವಾಡ ಮುಂತಾದವರಿದ್ದರು.

# ಜಾಮೀನು ನಿರಾಕರಿಸುವ ಪ್ರವೃತ್ತಿ ಹೆಚ್ಚಳ: ಸಿಜೆಐ ಚಂದ್ರಚೂಡ್ ಕಳವಳ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅಪರಾಧ ಪ್ರಕರಣಗಳಲ್ಲಿ ಜಾಮೀನು ನೀಡಬಹುದಾಗಿದ್ದರೂ ನೀಡದೆ, ವಿಚಾರಣಾ ನ್ಯಾಯಾಲಯಗಳ ನ್ಯಾಯಾಧೀಶರು ಹೊಣೆಗಾರಿಕೆಯನ್ನು ಉನ್ನತ ನ್ಯಾಯಾಲಯಗಳಿಗೆ ದಾಟಿಸುವುದು ಹೆಚ್ಚಾಗುತ್ತಿದೆ ಎಂದು ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಕಳವಳ ವ್ಯಕ್ತಪಡಿಸಿದ್ದಾರೆ.

### ಸಂಸದ ಬಸವರಾಜ ಬೊಮ್ಮಾಯಿ ಅವರಿಂದ ಕಾರ್ಯಕರ್ತರಿಗೆ, ಮತದಾರರಿಗೆ ಅಭಿನಂದನಾ ಸಮಾರಂಭ


# ಭ್ರಷ್ಟಾಚಾರದ ವಿರುದ್ಧ ಹೋರಾಟಕ್ಕೆ ಸಿದ್ಧ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ರಾಜ್ಯದಲ್ಲಿ ಬರಗಾಲ ಬಂದರೆ ಪರಿಹಾರ ಕೊಡಲಿಲ್ಲ, ರೈತರಿಗೆ ಏನೂ ಕೊಡಲಿಲ್ಲ, ರಸ್ತೆ ದುರಸ್ತಿ ಮಾಡಲು ಸಹ ಹಣ ನೀಡದ ರಾಜ್ಯ ಕಾಂಗ್ರೆಸ್ ಸರ್ಕಾರ ತನ್ನ ವೈಫಲ್ಯವನ್ನು ಮುಚ್ಚಿಕೊಳ್ಳಲು ಕೇಂದ್ರದ ಮೇಲೆ ಗೂಬೆ ಕೂಡಿಸುವ ಕೆಲಸವನ್ನು ಮಾಡುತ್ತಿದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಮಾಜಿ ಸಚಿವ ಕಳಕಪ್ಪ ಬಂಡಿ ಗೃಹ ಕಚೇರಿಯಲ್ಲಿ ರವಿವಾರ ಹಾವೇರಿ-ಗದಗ ಲೋಕಸಭಾ ಮತಕ್ಷೇತ್ರದ ನೂತನ ಸಂಸದರಾಗಿ ಆಯ್ಕೆಯಾದ ಬಸವರಾಜ ಬೊಮ್ಮಾಯಿ ಅವರಿಂದ ಕಾರ್ಯಕರ್ತರಿಗೆ, ಮತದಾರರಿಗೆ ನಡೆದ ಅಭಿನಂದನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರವು ಬಜೆಟ್‌ನಲ್ಲಿ ರಾಜ್ಯ ರೈಲ್ವೆಗೆ 7329 ಸಾವಿರ ಕೋಟಿ, ಬಂಡವಾಳ ಹೂಡಿಕೆಗೆ 6280 ಸಾವಿರ ಕೋಟಿ ಸೇರಿ ಹಲವಾರು ವಿಭಾಗಗಳಲ್ಲಿ ಬಜೆಟ್‌ನಲ್ಲಿ ಆದ್ಯತೆ ನೀಡಿದೆ ಎಂದ ಅವರು, ಒಕ್ಕಲುತನವೇ ಪ್ರಧಾನವಾಗಿರುವ ರೋಣ ಮತಕ್ಷೇತ್ರದಲ್ಲಿ ಪ್ರಧಾನಮಂತ್ರಿ ಗ್ರಾಮ್ ಸಡಕ್ ಮೂಲಕ ರಸ್ತೆಗಳ ನಿರ್ಮಾಣ ಜತೆಗೆ ಅಭಿವೃದ್ಧಿ ಕಾರ್ಯಗಳನ್ನು ನಡೆಸುವೆ. ಕಾರವಾರ-ಇಲಕಲ್ ರಾಷ್ಟ್ರೀಯ ಹೆದ್ದಾರಿಗೆ ಮೊದಲ ಪ್ರಾಶಸ್ತ್ಯ ನೀಡುತ್ತಿದ್ದು, ಮತಕೇತ್ರವು ಬಾಗಶಃ ರಾಷ್ಟ್ರೀಯ ಹೆದ್ದಾರಿಗೆ ಒಳಪಡಲಿದೆ. ಧಾರವಾಡ-ಕಲ್ಬುರ್ಗಿ ಡಿಪಿಆರ್ ಹಂತದಲ್ಲಿದ್ದು ಮುಂದಿನ ದಿನಗಳಲ್ಲಿ ರಸ್ತೆ ನಿರ್ಮಾಣದ ಪಟ್ಟಿಗೆ ಸೇರಿಸುವ ಕೆಲಸವನ್ನು ಮಾಡುತ್ತೇನೆ ಎಂದರು.



ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಸಂವಿಧಾನ ತಿರುಚಿ ಎಲ್ಲರನ್ನು ಜೈಲಿಗೆ ಹಾಕಿದ ಖ್ಯಾತಿ ಕಾಂಗ್ರೆಸ್‌ಗೆ ಸಲ್ಲುತ್ತದೆ. ಮುಸ್ಲಿಂ ಹೆಣ್ಣು ಮಕ್ಕಳಿಗೆ ವಿಚ್ಛೇದನವಾದರೆ ಮಹಿಳೆಯರಿಗೆ ಹಣಕಾಸಿನ ನೆರವು ಮಾಡಬೇಕು ಎಂದು ಸುಪ್ರೀಂ ಕೋರ್ಟ್‌ನ ಆದೇಶ ಬಂದರೆ, ಅದನ್ನು ಮಾಡಬೇಕಾಗುತ್ತದೆ ಎಂದು ಸಂವಿಧಾನಕ್ಕೆ ತಿದ್ದುಪಡಿ ತಂದು ಹೆಣ್ಣುಮಕ್ಕಳಿಗೆ ಅನ್ಯಾಯ ಮಾಡಿದ್ದು ಕಾಂಗ್ರೆಸ್ ಪಕ್ಷವೇ ಆಗಿದೆ ಎಂದರು.

ಮಾಜಿ ಸಚಿವ ಕಳಕಪ್ಪ ಬಂಡಿ ಮಾತನಾಡಿ, ನಮ್ಮ ಸಂಸದರು ಮಾದರಿಯಾಗಬೇಕು ಎಂದು ಬಯಸುತ್ತೇವೆ. ಆದರೆ ಗುಡಿಗೆ, ಸಮುದಾಯ ಭವನಕ್ಕೆ ಅನುದಾನ ಕೇಳಲು ಬಂದರೆ ಹೇಗೆ ಸಂಸದರು ಮಾದರಿಯಾಗುತ್ತಾರೆ. ಸಂಸದರು 50 ಪ್ರತಿಶತ ಅನುದಾನವನ್ನು ಸರ್ಕಾರಿ ಶಾಲಾ ಅಭಿವೃದ್ಧಿಗಳಿಗೆ, ಇನ್ನುಳಿದ ಅನುದಾನವನ್ನು ಜನತೆಯ ಬೇಡಿಕೆಗಳಿಗೆ ಬಳಸಲು ಮುಂದಾಗಿ ಎಂದರು.

> ಸಂವಿಧಾನಕ್ಕೆ ಅಪಚಾರ ಮಾಡಿದ್ದು ಕಾಂಗ್ರೆಸ್ ಹೊರತು ಬಿಜೆಪಿಯಲ್ಲ. ರಾಜ್ಯ ಸರ್ಕಾರ ಭ್ರಷ್ಟಾಚಾರದ ವಿರುದ್ಧ ಹೋರಾಟಕ್ಕೆ ಸಿದ್ಧವಿದ್ದೇವೆ. ಉತ್ತರ ಕರ್ನಾಟಕದಲ್ಲಿ ಮುಂದಿನ ದಿನಗಳಲ್ಲಿ ರಾಜಕಾರಣದಲ್ಲಿ ಭಾರೀ ಬದಲಾವಣೆಯಾಗಲಿದ್ದು, ಅದು ರೋಣ ಮತಕ್ಷೇತ್ರದಿಂದ ಪ್ರಾರಂಭವಾಗುತ್ತದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಇಂದಿರಾ ತೇಲಿ, ಬಿ.ಎಂ. ಸಜ್ಜನರ, ನಿಂಗಪ್ಪ ಕೆಂಗಾರ ಮಾತನಾಡಿದರು. ರಾಜು ಕುರಡಗಿ, ಎಂ.ಎಸ್. ಕರಿಗೌಡ್ರ, ವೀರಪ್ಪ ಪಟ್ಟಣಶೆಟ್ಟಿ, ಶಿವಾನಂದ ಮಠದ, ಉಮೇಶ ಮಲ್ಲಾಪೂರ, ಬಸವರಾಜ ಬಂಕದ, ಸಿದ್ದಣ್ಣ ಬಳಿಗೇರ, ಸುಭಾಸ ಮ್ಯಾಗೇರಿ, ರೂಪೇಶ ರಾಠೋಡ, ಲಕ್ಷ್ಮೀ ಮುಧೋಳ, ರಾಜೇಂದ್ರ ಘೋರ್ಪಡೆ, ಉಮೇಶ ಚನ್ನುಪಾಟೀಲ, ಶ್ರೀನಿವಾಸ ಸವದಿ ಸೇರಿ ಇತರರು ಇದ್ದರು.

# ವಿದ್ಯಾರ್ಥಿಗಳಲ್ಲಿ ಮನೋಸ್ಥೈರ್ಯವಿರಲಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಪಾಲಕರ ಕನಸುಗಳನ್ನು ನನಸು ಮಾಡುವ ಹೊಣೆ ವಿದ್ಯಾರ್ಥಿಗಳದ್ದಾಗಿದೆ. ಹಾಗಾಗಿ ಕನಸುಗಳ ಸಾಕಾರಕ್ಕಾಗಿಅವರು ನಿರಂತರ ಪ್ರಯತ್ನವಾದಿಗಳಾಗಬೇಕು. ಕೇವಲ ಕನಸು ಕಾಣುವದಲ್ಲ, ಆ ಕನಸಿಗೆ ಸೃಷ್ಟಿರೂಪ ಕೊಡುವ ಮನೋಸ್ಥೈರ್ಯವಿರಲಿ ಎಂದು ಡಾ. ಅಬ್ದುಲ್‌ಅಜೀಜ ಮುಲ್ಲಾ ಅಭಿಪ್ರಾಯಪಟ್ಟರು.

ಸನ್ಮಾರ್ಗ ಕಾಲೇಜಿನಲ್ಲಿ ಜರುಗಿದ ಪ್ರಥಮ ಪಿಯು ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಹಾಗೂ ಕಾಲೇಜು ಸಂಸತ್ತಿನ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸ್ಟೂಡೆಂಟ್ಸ್ ಎಜುಕೇಶನ್ ಸೊಸೈಟಿಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ ಮಾತನಾಡಿ, ನಿಮ್ಮ ಜ್ಞಾನದ ಗುರಿಯನ್ನು ತಲುಪಿದಾಗ ನಿಮ್ಮ ಸಾಧನೆಯ ಸಾಕ್ಷಾತ್ಕಾರವಾಗುತ್ತದೆ. ಗುರಿ ಸಾಧನೆಗೆ ಅಚಲ ನಿರ್ಧಾರವಿರಲಿ ಎಂದರು.

ಪ್ರೊ. ರೋಹಿತ್ ಒಡೆಯರ್, ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಮಾತನಾಡಿದರು. ಸಮಾರಂಭದಲ್ಲಿ ಸಂಸ್ಥೆಯ ನಿದೇಶಕರಾದ ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್ ಹಾಗೂ ಕಾಲೇಜಿನ ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ ಉಪಸ್ಥಿತರಿದ್ದರು.

ಶ್ರದ್ಧಾ, ಹರ್ಷಿತಾ, ಸಂಜನಾ ಹಾಗೂ ನಯನಾ ಪ್ರಾರ್ಥಿಸಿದರು. ಪ್ರೊ. ಶ್ರೀಶುಭ ಗಣ್ಯರನ್ನು ಪರಿಚಯಿಸಿದರು. ಹಿರಿಯ ಉಪನ್ಯಾಸಕ ಪ್ರೊ. ಹೇಮಂತ ದಳವಾಯಿ ನೂತನವಾಗಿ ಆಯ್ಕೆಯಾದ ಕಾಲೇಜಿನ ಕಾರ್ಯದರ್ಶಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದರು. ಪ್ರೊ.ಮುರಲೀಧರ ಸಂಕನೂರ ನಿರೂಪಿಸಿದರು. ಪ್ರೊ. ರಾಹುಲ್ ಒಡೆಯರ್ ವಂದಿಸಿದರು. ಕಾರ್ಯಕ್ರಮದಲ್ಲಿ ಎಲ್ಲ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಗುಣಾತ್ಮಕ ಶಿಕ್ಷಣದಿಂದ ಜಿಲ್ಲೆಯ ಫಲಿತಾಂಶ ಸುಧಾರಿಸಿ

**▶▶ ಮೊದಲನೇ ಪುಟದಿಂದ**

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೇರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಯ ಶೈಕ್ಷಣಿಕ ಫಲಿತಾಂಶ ಉನ್ನತೀಕರಿಸುವಲ್ಲಿ ಗುಣಾತ್ಮಕ ಶಿಕ್ಷಣದ ಕುರಿತು ಚಿಂತನೆ ಮಾಡುವ ಅಗತ್ಯವಿದೆ. ಶಿಕ್ಷಕರನ್ನು ಒಂದು ಕಡೆ ಸೇರಿಸಿ ಅವರ ಅಭಿಪ್ರಾಯಗಳನ್ನು ಒಗ್ಗೂಡಿಸಿ ಫಲಿತಾಂಶ ಸುಧಾರಣೆಗಾಗಿ ಚಿಂತನೆ ಮಾಡುವ ಆಲೋಚನೆಯನ್ನು ಜಿಲ್ಲಾ ಉಸ್ತುವಾರಿ ಸಚಿವರು ಮಾಡಿದ್ದಾರೆ. ಶಾಲಾ ಮಕ್ಕಳ ದಾಖಲು, ಹಾಜರು, ಕಲಿಕೆ ಸಮರ್ಪಕವಾಗಿರುವುದು ಇಂದಿನ ಅಗತ್ಯವಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ಪ್ರೌಢಶಾಲಾ ಮತ್ತು ಪದವಿಪೂರ್ವ ಕಾಲೇಜು ಮುಖ್ಯಸ್ಥರು ತಮ್ಮ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಡಯಟ್ ಪ್ರಾಚಾರ್ಯ ಜಿ.ಎಲ್. ಬಾರಾಟಕ್ಕೆ, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಕುರ್ತಕೋಟಿ ಸೇರಿದಂತೆ ತಾಲೂಕಾ ಶಿಕ್ಷಣಾಧಿಕಾರಿಗಳು, ಪ್ರೌಢಶಾಲಾ ಮತ್ತು ಪದವಿಪೂರ್ವ ಕಾಲೇಜಿನ ಮುಖ್ಯಸ್ಥರು, ಗಣ್ಯರು ಹಾಜರಿದ್ದರು. ಶಿವಾನಂದ ಗಿಡ್ನಂದಿ ಕಾರ್ಯಕ್ರಮ ನಿರೂಪಿಸಿದರು.

# ಗಣಪತಿ ಹಬ್ಬ ಕೇವಲ ಮೋಜು ಆಗದಿರಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಬೆಟಗೇರಿಯ ಟರ್ನಲ್ ಪೇಟ್‌ನಲ್ಲಿ ಕ್ರಾಂತಿ ಸೇನಾ ಹಿಂದೂ ಮಹಾಗಣಪತಿ ಪ್ರತಿಷ್ಠಾಪನೆ ಮಾಡುವ ಕುರಿತು ಕ್ರಾಂತಿ ಸೇನಾ ಕಾರ್ಯಾಲಯದಲ್ಲಿ ಸಭೆ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಕ್ರಾಂತಿ ಸೇನಾ ಗದಗ ಜಿಲ್ಲಾಧ್ಯಕ್ಷ ಬಾಬು ಬಾಕಳೆ ಮಾತನಾಡಿ, ಬೆಟಗೇರಿಯಲ್ಲಿ ಕ್ರಾಂತಿ ಸೇನಾ ಹಿಂದೂ ಮಹಾಗಣಪತಿ ಪ್ರತಿಷ್ಠಾಪನೆ ಮಾಡುವುದಾಗಿ ನಿರ್ಧರಿಸಿರುವುದು ಖುಷಿಯ ವಿಚಾರ. ಗಣಪತಿ ಹಬ್ಬ ಕೇವಲ ಮೋಜು-ಮಸ್ತಿ ಆಗಬಾರದು. ನಾವೆಲ್ಲರೂ ಈ ಹಬ್ಬವನ್ನು ಯಾವುದಾದರೊಂದು ಬಡ ಕುಟುಂಬಕ್ಕೆ ಆಸರೆ ಆಗುವಂತಹ ಕೆಲಸವನ್ನು ಮಾಡಿ, ಗಣಪತಿ ಹಬ್ಬಕ್ಕೆ ಸಮರ್ಪಿಸೋಣ ಎಂದು ಹೇಳಿದರು.




ಜಿಲ್ಲಾ ಗೌರವ ಕಾರ್ಯದರ್ಶಿ ಪ್ರವೀಣ ಹಬೀಬ ಮಾತನಾಡಿ, ಈ ಬಾರಿ ಬೆಟಗೇರಿಯಲ್ಲಿ ಕ್ರಾಂತಿ ಸೇನಾ ಹಿಂದೂ ಮಹಾಗಣಪತಿ ಪ್ರತಿಷ್ಠಾಪನೆ ಮಾಡಿ ನಾವೆಲ್ಲರೂ ಗಣಪತಿ ಹಬ್ಬವನ್ನು ವಿಜೃಂಭಣೆಯಿಂದ ಆಚರಿಸೋಣ ಎಂದು ಹೇಳಿದರು.

ಗದಗ ಜಿಲ್ಲಾ ಮಹಿಳಾ ಅಧ್ಯಕ್ಷೆ ರಾಣಿ ಚಂದಾವರಿ ಮಾತನಾಡಿದರು. ಮಹಿಳಾ ಗೌರವ ಕಾರ್ಯದರ್ಶಿ ರೇಣುಕಾ ಕಬಾಡಿ, ಮಹಿಳಾ ಖಜಾಂಚಿ ಅಕ್ಷತಾ ಪವಾರ್, ರವಿತೇಜ ಶ್ಯಾವಿ, ಶಿವಕುಮಾರ್ ಕುಂಬಾರ, ವಿನಾಯಕ ಕಾಟವಾ, ಬಸವರಾಜ ತಟ್ಟಿ, ಕಿರಣ್ ಪಟ್ಟಣಶೆಟ್ಟಿ, ಪ್ರದೀಪ್ ಸರ್ವಾದೆ, ರಾಮು ಕಬಾಡಿ, ವಿನಯ್ ಬಾಂಡಗೆ, ಪವನ್ ಪುರದ್, ರಾಮಣ್ಣ ನವಲಗುಂದ್, ಸುನಿಲ್ ಮುಂತಾದವರು ಉಪಸ್ಥಿತರಿದ್ದರು.

# ಸತ್ಸಂಗದಿಂದ ಮಾನಸಿಕ ನೆಮ್ಮದಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್**

ನಿತ್ಯದ ತನ್ನ ಜಂಜಡದ ಬದುಕಿನಲ್ಲಿ ಮನುಷ್ಯ ತನ್ನ ನೆಮ್ಮದಿಯನ್ನೇ ಕಳೆದುಕೊಂಡಿರುತ್ತಾನೆ. ಅವನಿಗೆ ಮಾನಸಿಕ ನೆಮ್ಮದಿ ದೊರಕುವುದು ಸತ್ಸಂಗದಿಂದ ಮಾತ್ರ. ಸತ್ಸಂಗವು ಮನುಷ್ಯನ ನೆಮ್ಮದಿಯನ್ನು ಹೆಚ್ಚಿಸುವುದರಲ್ಲಿ ಸಹಾಯ ಮಾಡುತ್ತದೆ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ. ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇಸ್ಥಾನದಲ್ಲಿ ಜರುಗಿದ ಎರಡನೇ ವಾರದ ಹನುಮಾನ ಚಾಲೀಸಾ ಪಠಣದ ಸತ್ಸಂಗದ ಸಭೆಯಲ್ಲಿ ಅವರು ಮಾತನಾಡಿದರು.

ವಾರವಾರವೂ ಈ ಸತ್ಸಂಗದ ಸಭೆ ತನ್ನ ಗುರಿಯನ್ನು ಸಾಧಿಸುವತ್ತ ದಿಟ್ಟ ಹೆಜ್ಜೆಯನ್ನಿಡುತ್ತಿದೆ. ಪ್ರತಿ ಗುರುವಾರ ನಡೆಸುವ ಈ ಸತ್ಸಂಗದಲ್ಲಿ ಹದಿಮೂರು ಬಾರಿ ಹನುಮಾನ ಚಾಲೀಸಾವನ್ನು ಪಠಿಸಿ ಅದೆಷ್ಟೋ ಜನ ನೆಮ್ಮದಿಯನ್ನು ಕಾಣುತ್ತಿದ್ದಾರೆ ಎಂದು ಕುಲಕರ್ಣಿ ಹೇಳಿದರು.

ಈ ಸಂದರ್ಭದಲ್ಲಿ ಎ.ಜಿ. ಕುಲಕರ್ಣಿ, ನಾಗೇಶಭಟ್ಟ ಗ್ರಾಮಪುರೋಹಿತ, ಬಿ.ಎಲ್. ಕುಲಕರ್ಣಿ, ಅಜಿತ ಕುಲಕರ್ಣಿ, ಮುಕುಂದ ಸೂರಭಟ್ಟನವರ, ವಿಮಲಾಬಾಯಿ ಗ್ರಾಮಪುರೋಹಿತ, ಶೋಭಾ ಕುಲಕರ್ಣಿ, ಸನ್ಮತಿ ಸದರಜೋಷಿ, ಪದ್ಮಾ ಕುಲಕರ್ಣಿ, ಪ್ರಿಯಾ ಕುಲಕರ್ಣಿ, ಶೋಭಾ ಸೂರಭಟ್ಟನವರ, ಪ್ರಭಾ ರಾಯಭಟ್ಟನವರ, ರಾಜಶ್ರೀ ಕುಲಕರ್ಣಿ, ವಾಣಿ, ಭಾಗ್ಯಾಬಾಯಿ ಕಾಳೆ, ವಿದ್ಯಾ ಗ್ರಾಮಪುರೋಹಿತ, ಲಕ್ಷ್ಮೀ ಗ್ರಾಮಪುರೋಹಿತ, ಸುಶಿಲಾ ಪುರಾಣಿಕ, ಅನಿತಾ ಗ್ರಾಮಪುರೋಹಿತ, ರೇಣುಕಾ ಗ್ರಾಮಪುರೋಹಿತ ಮುಂತಾದವರು ಪಾಲ್ಗೊಂಡಿದ್ದರು.

### ವೈದ್ಯರ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ. ಕೆ.ಬಿ. ಧನ್ನೂರ

# ವೈದ್ಯರ ಮೇಲೆ ವಿಶ್ವಾಸವನ್ನಿಡಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್**

ವೈದ್ಯರು ಆಧುನಿಕ ಕಾಲದ ಸಂಜೀವಿನಿಯಾಗಿದ್ದಾರೆ. ಅವರ ಬಳಿಗೆ ಬರುವ ರೋಗಿಗಳು ಮತ್ತು ಅವರ ಸಂಬಂಧಿಕರು ಅವರ ಮೇಲೆ ವಿಶ್ವಾಸವನ್ನಿಟ್ಟರೆ ಗುಣಮುಖರಾಗಲು ಸಾಧ್ಯ. ಸುದೈವದಿಂದ ನರೇಗಲ್ಲ ಮತ್ತು ಸುತ್ತಲಿನ ಜನತೆ ಎಂದಿಗೂ ವೈದ್ಯರ ಮೇಲಿನ ವಿಶ್ವಾಸವನ್ನು ಕಳೆದುಕೊಳ್ಳದಿರುವುದಕ್ಕೆ ಹಿಂದಿನ ವೈದ್ಯರು ಹಾಕಿಕೊಟ್ಟ ಪಾಠವೇ ಕಾರಣ ಎಂದು ಡಾ. ಕೆ.ಬಿ. ಧನ್ನೂರ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ಬೀಚಿ ಬಳಗದ ಆಶ್ರಯದಲ್ಲಿ ಜರುಗಿದ ವೈದ್ಯರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತಮ್ಮ ವೈಯಕ್ತಿಕ ಜೀವನವನ್ನೂ ಮರೆತು ವೈದ್ಯರು ರೋಗಿಗಳ ಸೇವೆಗೆ ಹಗಲಿರುಳೂ ಶ್ರಮಿಸುತ್ತಾರೆ. ಮೊದಲ ಹಂತದಲ್ಲಿಯೆ ರೋಗಿಯನ್ನು ಉಪಚಾರಕ್ಕೆಂದು ಕರೆದುಕೊಂಡು ಬಂದರೆ ಆ ರೋಗಿಯನ್ನು ಸಂಪೂರ್ಣ ವಾಗಿ ಗುಣಪಡಿಸಬಹುದು. ಆದರೆ ಕೊನೆಯ ಹಂತದಲ್ಲಿ ಕರೆದುಕೊಂಡು ಬಂದು ನಂತರ ವೈದ್ಯರನ್ನು ದೂರುವುದು ಸರಿಯಲ್ಲ. ಇದನ್ನು ರೋಗಿಗಳ ಸಂಬಂಧಿಕರು ತಿಳಿದುಕೊಳ್ಳಬೇಕು. ಪಟ್ಟಣದ ಬೀಚಿ ಬಳಗದ ಸಾಹಿತ್ತಿಕ ಮತ್ತು ಸಾಮಾಜಿಕ ಕಾರ್ಯ ಶ್ಲಾಘನೀಯ ಎಂದು ಹೇಳಿದರು.

ಡಾ. ಜಿ.ಕೆ. ಕಾಳೆ ಮಾತನಾಡಿ, ಕಳೆದ ಮೂರೂವರೆ ದಶಕಗಳಿಂದ ನಾವು ನರೇಗಲ್ಲ ಪಟ್ಟಣ ಮತ್ತು ಸುತ್ತಲಿನ ಗ್ರಾಮಗಳ ಜನತೆಗೆ ವೈದ್ಯಕೀಯ ಸೇವೆಯನ್ನು ಒದಗಿಸುತ್ತಿದ್ದೇವೆ. ಮೊತ್ತಮೊದಲಿಗೆ ನಮ್ಮ ಸೇವೆಯನ್ನು ಗುರುತಿಸಿ ನಮ್ಮನ್ನು ಸನ್ಮಾನಿಸಿದ ಸಂಸ್ಥೆಯೆಂದರೆ ಅದು ಬೀಚಿ ಬಳಗ. ಈ ಬಳಗವು ನೀಡಿದ ಈ ಸನ್ಮಾನವನ್ನು ನಾವೆಂದಿಗೂ ಮರೆಯುವುದಿಲ್ಲ ಎಂದರು.



ಸಭೆಯನ್ನುದ್ದೇಶಿಸಿ ಡಾ. ಕೃಷ್ಣಾ ಜಿ.ಕಾಳೆ, ಡಾ. ಆರ್.ಕೆ. ಗಚ್ಚಿನಮಠ, ಡಾ. ಎಲ್.ಎಸ್. ಗೌರಿ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಮಾತನಾಡಿದರು, ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾರಂಭದಲ್ಲಿ ಡಾ. ಡೇನಿಯಲ್ ಫ್ರೆಡ್ರಿಕ್ಸ್, ಡಾ. ಸಪ್ನಾ ಕಾಳೆ, ಡಾ. ನಿರ್ಮಲಾ ನಾಶಿಪುಡಿ, ಡಾ. ಶಿವಯ್ಯ ರೋಣದ, ಡಾ. ನಾಗರಾಜ ಗ್ರಾಮಪುರೋಹಿತ, ಡಾ. ಎಲ್. ಆರ್. ರಡ್ಡೇರ, ಡಾ. ಜುಬೇದಾ ರೋಣದ, ವೈದ್ಯೆ ಕುರಿ, ಯೋಗಾ ಥೆರಪಿಸ್ಟ್ ಅಶ್ವಿನಿ ರಡ್ಡೇರ, ಡಾ. ಸುಷ್ಮಾ ಸಂಗನಾಳಮಠ ಇನ್ನೂ ಮುಂತಾದವರನ್ನು, ಕಾಯಕ ರತ್ನ ಪ್ರಶಸ್ತಿ ಪುರಸ್ಕೃತ ಮುತ್ತು ಹಡಪದ ಅವರನ್ನು ಸನ್ಮಾನಿಸಲಾಯಿತು.

ಅಧ್ಯಕ್ಷತೆ ವಹಿಸಿದ್ದ ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಮಾತನಾಡಿ ನಮ್ಮ ಜೀವ ಉಳಿಸುವ ಎಲ್ಲ ವೈದ್ಯರುಗಳನ್ನು ಒಂದೇ ವೇದಿಕೆಯಲ್ಲಿ ಕಂಡು ಸಂತಸವಾಗಿದೆ. ಈ ಎಲ್ಲರನ್ನೂ ಸನ್ಮಾನಿಸುವ ಸೌಭಾಗ್ಯ ಬೀಚಿ ಬಳಗಕ್ಕೆ ದೊರಕಿರುವುದು ಅತ್ಯಂತ ಸಂತೋಷವನ್ನುಂಟು ಮಾಡಿದೆ ಎಂದರು.

ವೈದ್ಯರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕ ಬಿ.ಬಿ. ಕುರಿ, ಶಿಕ್ಷಕ ಬಿ.ಟಿ. ತಾಳಿ, ನಿವೃತ್ತ ನೌಕರರ ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ, ಶಿಕ್ಷಕ ಸಿ.ಕೆ. ಕೇಸರಿ, ಎಂ.ಎಚ್. ಸಿದ್ದಿ, ಮಾಜಿ ಯೋಧರಾದ ಶಿವಪುತ್ರಪ್ಪ ಸಂಗನಾಳ, ಪ್ರಭು ಮುಕ್ಕನಗೌಡ್ರ, ಶಿವಯೋಗಿ ಜಕ್ಕಲಿ, ವಿ.ಎ. ಕುಷ್ಟಗಿ, ಮುಖ್ಯೋಪಾಧ್ಯಾಯೆ ಎನ್.ಎಸ್. ಹಿರೇಮಠ, ಕೆ.ಎಸ್. ಹಡಪದ, ರಾಜಶೇಖರಗೌಡ ಪಾಟೀಲ, ಜಿ.ಎ. ಬೆಲ್ಲದ, ಮುಖ್ಯೋಪಾಧ್ಯಾಯೆ ಭಾರತಿ ಶಿರ್ಸಿ, ಎಸ್.ಕೆ. ಪಾಟೀಲ, ನಿವೃತ್ತ ಶಿಕ್ಷಕಿ ಎಚ್.ಎಂ. ರತ್ನಮ್ಮ, ಶಿಕ್ಷಕಿ ಟಿ.ಜಿ. ಕಂಬಾಳಿಮಠ, ಮುಖ್ಯ ಶಿಕ್ಷಕ ಪ್ರಭುಸ್ವಾಮಿಮಠ, ಎ.ಎಸ್. ಅಣಗೌಡ್ರ, ದೈಹಿಕ ಶಿಕ್ಷಕ ಆರ್.ಎಸ್. ನರೇಗಲ್ಲ, ಶಿಕ್ಷಕ ವಿ.ಎ. ಕುಂಬಾರ, ಬೀಚಿ ಬಳಗದ ಸದಸ್ಯರು ಪಾಲ್ಗೊಂಡಿದ್ದರು

> ಸರಕಾರಿ ಆಸ್ಪತ್ರೆಯ ವೈದ್ಯಾಧಿಕಾರಿ ಡಾ. ಸಾಮುದ್ರಿ ಮಾತನಾಡಿ, ಕಳೆದ ಹತ್ತು ವರ್ಷಗಳಿಂದ ಇಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿದ್ದೇನೆ. ಇಲ್ಲಿನ ಜನತೆಯ ಮತ್ತು ಪಟ್ಟಣದ ಹಿರಿಯ ವೈದ್ಯರ ಸಹಕಾರ ಮತ್ತು ಮಾರ್ಗದರ್ಶನವನ್ನು ನನ್ನ ಜೀವನದಲ್ಲಿ ಮರೆಯಲಾರೆ. ಬೀಚಿ ಬಳಗವು ನನ್ನ ಸೇವೆಯನ್ನು ಗುರತಿಸಿ ನನ್ನನ್ನೂ ಸನ್ಮಾನಿಸಿರುವುದು ನನ್ನ ಜೀವನದ ಅವಿಸ್ಮರಣೀಯ ಘಟನೆಗಳಲ್ಲಿ ಒಂದಾಗಿದೆ ಎಂದರು.

### ಶ್ರೀ ರಾಘವೇಂದ್ರ ಸ್ವಾಮಿಗಳ ಆರಾಧನೆ

# ಮಹಿಳೆಯರಿಗಾಗಿ ವಿವಿಧ ಸ್ಪರ್ಧೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ರಾಘವೇಂದ್ರ ಸ್ವಾಮಿಗಳ 353ನೇ ಆರಾಧನೆಯ ನಿಮಿತ್ತ ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಭಜನಾ ಮಂಡಳಿಗಳ ಮಹಿಳೆಯರಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.ಜು.28ರಿಂದ ಅ. 15ರವರೆಗೆ ಈ ಸ್ಪರ್ಧೆಗಳು ಜರುಗಲಿದ್ದು, ಭಜನಾ ಮಂಡಳಿಗಳು ಪಾಲ್ಗೊಳ್ಳುವಂತೆ ಕೋರಲಾಗಿದೆ. ಭಾಗವಹಿಸುವ ಸ್ಪರ್ಧಾಳುಗಳು ಸ್ಪರ್ಧೆಯ ಮುಂಚಿತವಾಗಿ ಶ್ರೀ ವೀರನಾರಾಯಣ ದೇವಸ್ಥಾನದ ಕಚೇರಿಯಲ್ಲಿ ಅಥವಾ ಈ ಸುನೀಲ ಕುಲಕರ್ಣಿ-9844415705, ವಿಜಯವಿಠ್ಠಲ ಗುಡಿ-6362520887, ಪವನ ಪುರಾಣಿಕ-9449167337, ವರ್ಷಾ ಹರಿಬಲ್-7676287678 ಸಂಖ್ಯೆಗಳಿಗೆ ವಾಟ್ಸಾಪ್ ಮೂಲಕ ನೋಂದಾಯಿಸಬಹುದು.ಜು. 31ರಂದು ಸಾಯಂಕಾಲ 4 ಗಂಟೆಗೆ ಭಜನಾ ಸ್ಪರ್ಧೆ, ಅ. 15ರಂದು ಮಧ್ಯಾಹ್ನ 3-30ಕ್ಕೆ ನಿರಗ್ನಿಕ ಪಾಕ ಸ್ಪರ್ಧೆ ಜರುಗಲಿವೆ. ಭಜನಾ ಸ್ಪರ್ಧಾಳುಗಳು ಒಂದು ತಂಡದಲ್ಲಿ ಕನಿಷ್ಠ ನಾಲ್ಕು ಜನರಿರಬೇಕು. ಶ್ರೀ ರಾಘವೇಂದ್ರ ಸ್ವಾಮಿಗಳ, ಮುಖ್ಯಪ್ರಾಣದೇವರ, ಲಕ್ಷ್ಮೀದೇವಿಯ ಹಾಗೂ ಭಗವಂತನ ಕುರಿತು 12 ನಿಮಿಷಗಳ ಕಾಲಾವಕಾಶದಲ್ಲಿ ಭಜನೆ ಹಾಡಬೇಕು. ನಿರಗ್ನಿಕ ಪಾಕ ಸ್ಪರ್ಧಾಳುಗಳು ಎರಡು ಸಿಹಿ ಪದಾರ್ಥ, ಒಂದು ಖಾರದ ಪದಾರ್ಥ, ಪಾನೀಯ, ಕೋಸಂಬರಿ ಮಾಡಬೇಕು. ಅಡುಗೆಗೆ ಬೇಕಾದ ಪದಾರ್ಥಗಳನ್ನು ತಾವೆ ತರಬೇಕು ಎಂದು ಪ್ರಕಟಣೆ ತಿಳಿಸಿದೆ.

### ಕವನ ಸಂಕಲನ ಲೋಕಾರ್ಪಣೆ, ಸಾಧನಕೇರಿಯ ಸಾಧಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ

# ಸಾಹಿತ್ಯ, ಬದುಕು ಒಂದೇ ನಾಣ್ಯದ ಮುಖಗಳು

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸಾಹಿತ್ಯದ ಬೆಳಕು ನೂರಾರು ಕಾಲ ಬೆಳಗುತ್ತಲೇ ಇರಬೇಕು. ದ.ರಾ. ಬೇಂದ್ರೆಯವರ ಈ ನಾಡಲ್ಲಿ ಅವರ ನಡೆ-ನುಡಿ, ಸಾಹಿತ್ಯದ ಪ್ರಭೆ ಇರುವುದರಿಂದ, ಇಂತಹ ಯುವ ಸಮೂಹ ಸಾಹಿತ್ಯದ ಮುಂಚೂಣಿಯಲ್ಲಿರುವುದು ಮುಂದಿನ ಸಮಾಜಕ್ಕೆ ಆಶಾದಾಯಕ ಬೆಳವಣಿಗೆ ಎಂದು ಕನಕದಾಸ ಶಿಕ್ಷಣ ಸಮಿತಿಯ ಕಾರ್ಯದರ್ಶಿ, ಚಲನಚಿತ್ರ ನಿರ್ಮಾಪಕರೂ ಆದ ರವೀಂದ್ರನಾಥ ಬಿ.ದಂಡಿನ ಅಭಿಪ್ರಾಯಪಟ್ಟರು.

ಇಲ್ಲಿನ ಅಕ್ಷರ ದೀಪ ಸಾಹಿತ್ಯ ಫೌಂಡೇಶನ್ ವತಿಯಿಂದ ಶ್ರೀ ಪ್ರವೀಣಕುಮಾರ ಕನ್ಯಾಳ ಅವರ ಚೊಚ್ಚಲ ಸಂಪಾದಕೀಯ ಕವನ ಸಂಕಲನ 'ಅಕ್ಷರ ದೀಪ'ದ ಲೋಕಾರ್ಪಣೆ ಹಾಗೂ ಸಾಧನಕೇರಿಯ ಸಾಧಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು



ಅಧ್ಯಕ್ಷತೆ ವಹಿಸಿದ್ದ ಸಾಹಿತಿ ಎಸ್.ಐ. ಕುಲಕರ್ಣಿ ಮಾತನಾಡಿ, ಸಾಹಿತ್ಯ ಹಾಗೂ ಬದುಕು ಒಂದೇ ನಾಣ್ಯದ ಎರಡು ಮುಖವಿದ್ದಂತೆ. ಕನ್ನಡಿಗರಾದ ನಮಗೆ ಕನ್ನಡ ಭಾಷೆ, ನೆಲದ ಅಭಿಮಾನ ಇರಬೇಕು. ಪ್ರತಿಯೊಬ್ಬರಲ್ಲಿಯೂ ಕನ್ನಡ ಬೇರೂರಬೇಕಿದೆ. ಮೊದಲು ಮಕ್ಕಳಿಗೆ ಕನ್ನಡ ಭಾಷೆ ಬರೆಯಲು, ಮಾತನಾಡಲು ಕಲಿಸಬೇಕು. ಆಗ ಮುಂದಿನ ಪೀಳಿಗೆ ಕನ್ನಡದ ಏಳ್ಗೆಯನ್ನು ಸಾಧಿಸಲು ಸಾಧ್ಯ ಎಂದರು.

ಕೃತಿಯ ಕುರಿತು ಗಣಪತಿ ಹೆಗಡೆ ದಾಂಡೇಲಿ ಮಾತನಾಡಿದರು. ರೋಹಿಣಿ ಮಿರ್ಜಿ, ನಿಶಾ ಮುಳಗುಂದ, ಕವಯತ್ರಿ ಚಂದ್ರಕಲಾ ಇಟಗಿಮಠ, ಪತ್ರಕರ್ತ ಮಂಜುನಾಥ ರಾಠೋಡ ಗಜೇಂದ್ರಗಡ, ಸಾಹಿತಿ ಪ್ರವೀಣಕುಮಾರ ಕನ್ಯಾಳ, ವಿಶೇಷ ಆಹ್ವಾನಿತರಾದ ರಾಘವೇಂದ್ರ ಕೋಲಕಾರ ಹುಬ್ಬಳ್ಳಿ, ಸಚಿನ್ ಒಡೆಯರ್ ಮುಂಡರಗಿ, ಡಾ. ವಸಂತ ಅಗಸಿಮನಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಸಾಧಕರಿಗೆ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಯಿತು. ಅರ್ಚನಾ ಪಾಟೀಲ್ ಗದಗ ಸ್ವಾಗತಿಸಿದರು. ಜಯಶ್ರೀ ತೆಗ್ಗಿನಮನಿ ನಿರೂಪಿಸಿದರು.

> ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕಪ್ಪತ್ತಗಿರಿ ವೇದಕೇಯ ರಾಜ್ಯಾಧ್ಯಕ್ಷರಾದ ಚಂದ್ರಕಲಾ ಇಟಗಿಮಠ ಮಾತನಾಡಿ, ನಮ್ಮ ಕನ್ನಡವನ್ನು ಉಳಿಸಬೇಕೆಂಬ ಆಶಯ ವ್ಯಕ್ತಪಡಿಸಿ, ಕನ್ನಡ ಕಿಚ್ಚನ್ನು ಎಲ್ಲೆಡೆ ಮೊಳಗಿಸುವುದರ ಮೂಲಕ ಅಕ್ಷರ ದೀಪ ಫೌಂಡೇಶನ್ ಹೆಮ್ಮೆ ಮೂಡಿಸುತ್ತಿದೆ ಎಂದರು.

## ಗುಣಮಟ್ಟದ ಕೊಠಡಿ ನಿರ್ಮಿಸಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಗುತ್ತಿಗೆದಾರರು ಗುಣಮಟ್ಟದ ಕೊಠಡಿಗಳನ್ನು ನಿರ್ಮಿಸಬೇಕು ಎಂದು ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಹೇಳಿದರು. ಅವರು ಪಟ್ಟಣದ ಶಿದ್ದೇಶ್ವರ ನಗದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ, ಗದಗ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಗ್ರಾಮೀಣ ವಲಯ, ಲೋಕೋಪಯೋಗಿ ಇಲಾಖೆ ಸಹಯೋಗದಲ್ಲಿ ಮಂಜೂರಾದ 40 ಲಕ್ಷ ರೂ ಮೊತ್ತದಲ್ಲಿ ದಾವಲ ಮಲಿಕ್ ಪಹಡದ ಸರಕಾರಿ ಕಿರಿಯ ಪ್ರಾಥಮಿಕ ಉರ್ದು ಶಾಲೆಯ ನೂತನ ಕೊಠಡಿಗಳ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಂ.ಎ. ರಡ್ಡೆರ, ಬಿಇಓ ವಿ.ವಿ. ನಡುವಿನಮನಿ, ಕೊಟ್ರೇಶ ವಿಭೂತಿ, ಪ.ಪಂ ಸದಸ್ಯರಾದ ಮಾಹಾಂತೇಶ ನೀಲಗುಂದ, ಎಸ್.ಸಿ. ಬಡ್ನಿ, ಮಾಹಾದೇವಪ್ಪ ಗಡಾದ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ವಿ. ಸುಂಕಾಪೂರ, ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ, ತಾಜು ಕಿಂಡ್ರಿ, ದಾವುದ ಜಮಾಲಸಾಬನವರ, ಶಾಲಾ ಪ್ರಧಾನ ಗುರುಗಳು, ಸಹ ಶಿಕ್ಷಕ ವೃಂದದವರು ಇದ್ದರು.

### ಸಭಾಪತಿ ಬಸವರಾಜ ಹೊರಟ್ಟಿಯವರಿಗೆ ಹೃದಯಸ್ಪರ್ಶಿ ಸನ್ಮಾನ

# ಶಿಕ್ಷಕರ ಋಣವನ್ನು ತೀರಿಸಲಾಗದು

■ವಿಜಯಸಾಕ್ಷಿ ಸುದ್ದಿ, ಗದಗ

ನಾನು ಇಂದು ಏನೇ ಆಗಿದ್ದರೂ, ಎಷ್ಟೇ ಎತ್ತರಕ್ಕೆ ಬೆಳೆದರೂ ಅದಕ್ಕೆ ಕಾರಣ ನನ್ನ ಹೆತ್ತ ತಾಯಿಯ ತ್ಯಾಗ ಮತ್ತು ನಾಲ್ಕು ದಶಕಗಳಿಂದ ಮತ ಹಾಕಿದ ಶಿಕ್ಷಕರ ವಿಶ್ವಾಸ ಹಾಗೂ ಪ್ರೀತಿ. ಹೀಗಾಗಿ ಅವರ ಋಣವನ್ನು ಎಂದಿಗೂ ತೀರಿಸಲಾಗದು ಎಂದು ಸಭಾಪತಿ ಬಸವರಾಜ ಹೊರಟ್ಟಿ ನುಡಿದರು.

ಅವರು ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ವಾರ್ತಾ ಮತ್ತು ಸಂಪರ್ಕ ಇಲಾಖೆ, ಕರ್ನಾಟಕ ಪತ್ರಕರ್ತರ ಸಂಘ ಹಾಗೂ ಅವ್ವ ಸೇವಾ ಟ್ರಸ್ಟ್ ಸಂಯುಕ್ತ ಆಶ್ರಯದಲ್ಲಿ ಅವ್ವ ಸೇವಾ ಟ್ರಸ್ಟ್ ಹಾಗೂ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಅವರ ಸ್ಮರಣಾರ್ಥ ನೀಡುವ ಮಾಧ್ಯಮ ಚೇತನ ಪ್ರಶಸ್ತಿ ಸಮಾರಂಭದಲ್ಲಿ 44 ವರ್ಷಗಳ ತಮ್ಮ ಸಂಸದೀಯ ಪಯಣದ ಸಾಧನೆಯ ಹೆಜ್ಜೆ ಗುರುತುಗಳನ್ನು ಮೂಡಿಸಿದ ಪ್ರಯುಕ್ತ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕಾನೂನು, ನ್ಯಾಯ, ಮಾನವ ಹಕ್ಕುಗಳ, ಸಂಸದೀಯ ವ್ಯವಹಾರ ಮತ್ತು ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಸಭಾಪತಿ ಬಸವರಾಜ ಹೊರಟ್ಟಿಯವರು ಒಬ್ಬ ಅಪರೂಪದ ರಾಜಕಾರಣಿ. ಶಿಕ್ಷಕರ ಪ್ರತಿನಿಧಿಯಾಗಿ 8 ಬಾರಿ ಆಯ್ಕೆಯಾಗುವ ಮೂಲಕ ದಾಖಲೆ ಮಾಡಿದ ಏಕೈಕ ಕನ್ನಡಿಗ ಹೊರಟ್ಟಿಯವರು ಎಂದು ಹೇಳಲು ಹೆಮ್ಮೆ ಹಾಗೂ ಅಭಿಮಾನವೆನಿಸುತ್ತದೆ. ಸಾರ್ವಜನಿಕ ಬದುಕಿನಲ್ಲಿ ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಪ್ರಜ್ಞಾವಂತ ಶಿಕ್ಷಕರೊಂದಿಗಿನ ಪ್ರೀತಿಯನ್ನು ಹಾಗೂ ವಿಶ್ವಾಸವನ್ನು ಹೊರಟ್ಟಿಯವರು ಎಂದಿಗೂ ಕಡಿಮೆ ಆಗದ ಹಾಗೆ ನೋಡಿಕೊಂಡಿದ್ದಾರೆ. ಇದಕ್ಕೆ ಕಾರಣ ಅವರ ನಿರಂತರ ಶ್ರಮ, ಹೋರಾಟ, ಜೊತೆಗೆ ಅವರ ನೇರ ನಡೆ-ನುಡಿ ಅವರನ್ನು ಇಷ್ಟೊಂದು ಎತ್ತರಕ್ಕೆ ಬೆಳೆಸಿದೆ ಎಂದರು.



ಈ ಸಂದರ್ಭದಲ್ಲಿ ಅವ್ವ ಸೇವಾ ಟ್ರಸ್ಟ ದತ್ತಿನಿಧಿ ಪ್ರಶಸ್ತಿಗೆ ಪಾತ್ರರಾದ ಹಿರಿಯ ಪತ್ರಕರ್ತೆ ಕೆ.ಎಚ್.ಸಾವಿತ್ರಿಯವರನ್ನು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳನ್ನು, ಮತ್ತು ಸಾಧಕ ಪತ್ರಕರ್ತರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ವಿಧಾನಪರಿಷತ್ ಸದಸ್ಯ ಎಸ್.ವ್ಹಿ.ಸಂಕನೂರ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಅವ್ವ ಸೇವಾ ಟ್ರಸ್ಟ್ ಸಂಚಾಲಕ ಡಾ.ಬಸವರಾಜ ಧಾರವಾಡ, ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ, ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರಾಜು ಹೆಬ್ಬಳ್ಳಿ, ಸೈಯದ ಸನಾವುಲ್ಲಾ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಬಾಗಾಧಿಕಾರಿ ಗಂಗಪ್ಪ ಎಂ. ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಜಿಲ್ಲೆಯ ವಿವಿಧ ಪತ್ರಕರ್ತರು, ಗಣ್ಯಮಾನ್ಯರು, ಹಿತೈಷಿಗಳು ಉಪಸ್ಥಿತರಿದ್ದರು. ಆನಂದಯ್ಯ ಹಿರೇಮಠ ನಿರೂಪಿಸಿದರು. ಮೌನೇಶ ಬಡಿಗೇರ ವಂದಿಸಿದರು.

ಒಬ್ಬ ಸಾಮಾನ್ಯ ಶಿಕ್ಷಕನಾದ ನನ್ನನ್ನು ಹಲವಾರು ಖಾತೆಯ ಸಚಿವನಾಗಿ, ಮೂರು ಬಾರಿ ಸಭಾಪತಿಯಾಗಿ ಸೇವೆ ಸಲ್ಲಿಸಲು ಅವಕಾಶ ಸಿಕ್ಕಿದ್ದು ನನ್ನ ಪೂರ್ವ ಜನ್ಮದ ಪುಣ್ಯ. ನನ್ನ ತಾಯಿಯ ಪೂಜೆ, ಹಾರೈಕೆ, ತ್ಯಾಗದ ಫಲದಿಂದ ಇವೆಲ್ಲ ಸಾಧ್ಯವಾಗಿದೆ. ಜೊತೆಗೆ ಎಂಟು ಬಾರಿ ನನಗೆ ಮತ ಹಾಕಿ ಐತಿಹಾಸಿಕ ದಾಖಲೆಗೆ ಕಾರಣೀಕರ್ತರಾದವರು ಶಿಕ್ಷಕರು. ಎಷ್ಟೋ ಬಾರಿ ನಾನು ನಂಬಿದ ಅನೇಕರು ನನಗೆ ಕೈಕೊಟ್ಟರೂ ಶಿಕ್ಷಕರೆಂದೂ ನನ್ನನ್ನು ಕೈ ಬಿಟ್ಟಿಲ್ಲ. ಅವರ ಋಣವನ್ನು ಎಂದಿಗೂ ತೀರಿಸಲು ಸಾಧ್ಯವಿಲ್ಲ. ಇಂದು ಸರ್ಕಾರ ವಿವಿಧ ಇಲಾಖೆಗಳು ಗದುಗಿನ ಹಿತೈಷಿಗಳು ನನ್ನನ್ನು ಅತ್ಯಂತ ಪ್ರೀತಿಯಿಂದ ಗೌರವಿಸಿದ್ದನ್ನು ನನ್ನ ಜೀವನದಲ್ಲಿ ಸದಾಕಾಲ ನೆನಪಿಟ್ಟುಕೊಳ್ಳುವಂತಹ ಶುಭ ದಿನವಾಗಿದೆ ಎಂದು ಬಸವರಾಜ ಹೊರಟ್ಟಿ ನುಡಿದರು.

### ಪಾಂಡುರಂಗ ಪತ್ತಿನ ಸಹಕಾರಿ ಸಂಘದ ವಾರ್ಷಿಕ ಸರ್ವ ಸಾಧಾರಣ ಸಭೆ

## ನಂಬಿಕೆ-ವಿಶ್ವಾಸವಿದ್ದಾಗ ಯಶಸ್ಸು ಸಾಧ್ಯ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದಲ್ಲಿ ಕಳೆದ 46 ವರ್ಷಗಳಿಂದ ಸಾರ್ವಜನಿಕರ ಮತ್ತು ಸದಸ್ಯರ ಸಹಕಾರದಿಂದ ಪಾಂಡುರಂಗ ಪತ್ತಿನ ಸಹಕಾರಿ ಸಂಘವು ರೂ.11 ಲಕ್ಷಕ್ಕೂ ಅಧಿಕ ಲಾಭವನ್ನು ಗಳಿಸಿದೆ ಎಂದು ಸಂಘದ ಅಧ್ಯಕ್ಷ ಅಜಿತಕುಮಾರ ವಂದಕುದರಿ ಹೇಳಿದರು.

ಸ್ಥಳೀಯ ಪಾಂಡುರಂಗ ಪತ್ತಿನ ಸಹಕಾರಿ ಸಂಘದ ಕಾರ್ಯಾಲಯದಲ್ಲಿ ನಡೆದ 2023-24ನೇ ಸಾಲಿನ ಸಂಘದ 46ನೇ ವಾರ್ಷಿಕ ಸರ್ವ ಸಾಧಾರಣ ಸಭೆಯಲ್ಲಿ ಅವರು ಮಾತನಾಡಿದರು.

ಸಹಕಾರಿಗಳ ನಡುವೆ ಪರಸ್ಪರ ನಂಬಿಕೆ-ವಿಶ್ವಾಸವಿದ್ದಾಗ ಮಾತ್ರ ಯಾವುದೇ ಬ್ಯಾಂಕ್ ಅಥವಾ ಸಹಕಾರ ಸಂಘಗಳು ಯಶಸ್ವಿಯಾಗಲು ಸಾಧ್ಯ. ಈ ದಿಸೆಯಲ್ಲಿ ಪಾಂಡುರಂಗ ಪತ್ತಿನ ಸಹಕಾರಿ ಸಂಘವು ಸದಸ್ಯರ ಆರ್ಥಿಕ ಅಭಿವೃದ್ಧಿಯೊಂದಿಗೆ ಬ್ಯಾಂಕಿನ ಸುದೀರ್ಘ ಅನುಭವ ದಕ್ಷತೆ ಹಾಗೂ ನಿಸ್ವಾರ್ಥ ಸೇವೆಯಿಂದಲೇ 46 ವರ್ಷ ಪೂರೈಸಲು ಸಾಧ್ಯವಾಗಿದ್ದು, ಲಾಭದಲ್ಲಿ ನೀಡುತ್ತಿರುವ ಡಿವಿಡೆಂಟನ್ನು ಸದಸ್ಯರು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಉಪಾಧ್ಯಕ್ಷ ಶ್ರೀನಿವಾಸ ಅಂಬೋರೆ ಮಾತನಾಡಿ, ಕೆರೆಯ ನೀರನ್ನು ಕೆರೆಗೆ ಚೆಲ್ಲಿ ಎನ್ನುವಂತೆ ಬ್ಯಾಂಕಿನಿಂದ ಸಾಲ ಪಡೆದ ಹಣವನ್ನು ಗ್ರಾಹಕರು ಸಮರ್ಪಕವಾಗಿ ಬಳಸಿಕೊಳ್ಳುವುದರ ಜತೆ-ಗೆ ಸಕಾಲದಲ್ಲಿ ಸಾಲ ಮರುಪಾವತಿ ಮಾಡಿದರೆ ನಿಮಗೆ ಸಾಲ ನೀಡಿದಂತೆ ಮತ್ತೊಬ್ಬ ಗ್ರಾಹಕರಿಗೆ ಸಾಲ ನೀಡಿ ಅವರ ಆರ್ಥಿಕ ಪ್ರಗತಿಗೆ ಸಹಕಾರ ನೀಡಿದಂತಾಗುತ್ತದೆ ಎಂದರು.

ಬ್ಯಾಂಕಿನ ವ್ಯವಸ್ಥಾಪಕ ಆರ್.ಪಿ. ಹೋಳಗಿ, ನಿರ್ದೇಶಕರಾದ ಬಿ.ಕೆ. ಬೇಲೇರಿ, ಎನ್.ಡಿ. ಶಿನ್ನೂರ, ಎಂ.ಎಸ್. ಮಾಕನದಾರ, ವಿ.ಆರ್. ಜಾಧವ, ವಿ.ವಾಯ್. ಮಾಂಡ್ರೆ, ಬಿ.ಸಿ. ಅಮಟೆ, ಎಸ್.ವಿ. ನಿಡಗುಂದಿ, ಹಾಗೂ ಮಲ್ಲಪ್ಪ ಮಳಗಿ, ಶರಣಪ್ಪ ರೇವಡಿ, ಸಂಗಪ್ಪ ಜಾಲಿಹಾಳ, ಮುತ್ತಣ್ಣ ಚಟ್ಟೇರ, ಜಿ.ಎಚ್. ರಂಗ್ರೇಜ, ಎಚ್.ಜಿ. ಮೋಮಿನ, ಈರಣ್ಣ ಯಂಕಚಿ, ಮುರ್ತುಜಾ ತಾಳಿಕೋಟಿ, ಗುರುನಾಥ ಯಂಕಂಚಿ, ಚಂದ್ರು ಕಿವುಡಜಾಡರ, ಬಿ.ಎಂ. ಮುಜಾವಾರ, ಪಿ.ಎಸ್. ಹೊಸಂಗಡಿ ಸೇರಿ ಇತರರು ಇದ್ದರು.

ಸಾನಿಧ್ಯ ವಹಿಸಿದ್ದ ಟಕ್ಕೇದ ದರ್ಗಾದ ಹಜರತ್ ಸೈಯದ್ ನಿಜಾಮುದ್ದೀನ ಶಾ ಮಕಾನದಾರ ಮಾತನಾಡಿ, ಸಹಕಾರವಿದ್ದರೆ ಸಂಘಗಳ ಬೆಳವಣಿಗೆ ಸಾಧ್ಯವಿದೆ. 74 ಸದಸ್ಯರಿಂದ ಆರಂಭವಾದ ಸಂಘವು ಇಂದು 19 ಲಕ್ಷಕ್ಕೂ ಅಧಿಕ ಶೇರು ಬಂಡವಾಳ ಹೊಂದುವ ಮೂಲಕ ರೂ.9 ಲಕ್ಷಕ್ಕೂ ಅಧಿಕ ಲಾಭವನ್ನು ಹೊಂದಿ, ಪಟ್ಟಣದಲ್ಲಿ ಸಣ್ಣ ವ್ಯಾಪಾರಿಗಳಿಗೆ ಆರ್ಥಿಕ ಶಕ್ತಿ ಕೇಂದ್ರವಾಗಿ ನಿರ್ಮಾಣವಾಗಿದೆ ಎಂದರು.

### ಆರ್ಝೂದ ಬ್ಯಾಂಕ್‌ನ ವಾರ್ಷಿಕ ಸಭೆ । ಶೇ. 12 ಡಿವ್ಹಿಡೆಂಡ್ ಘೋಷಣೆ

# ಆರ್ಝೂದ್ ಬ್ಯಾಂಕ್ ಪ್ರಗತಿ ಪಥದತ್ತ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಗತಿಪಥದಲ್ಲಿ ಮುನ್ನಡೆದಿರುವ ಆರ್ಝೂದ ಕೋ-ಆಪ್ ಬ್ಯಾಂಕ್ ಲಿಮಿಟೆಡ್ ಗದಗ ಲಾಭದಲ್ಲಿದ್ದು, ಶೇರುದಾರರಿಗೆ ಶೇ. 12 ಡಿವ್ಹಿಡೆಂಡ್ ನೀಡಲಿದೆ ಎಂದು ಬ್ಯಾಂಕ್ ಚೇರಮನ್ ಹಾಜಿ ಸರಫರಾಜಅಹ್ಮದ್ ಎಸ್.ಉಮಚಗಿ ಹೇಳಿದರು.

ಅವರು ರವಿವಾರ ಬ್ಯಾಂಕ್ ಸಭಾಂಗಣದಲ್ಲಿ ನಡೆದ ಬ್ಯಾಂಕ್‌ನ 63ನೇ ವಾರ್ಷಿಕ ಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಾಲ ಪಡೆದವರು ಬ್ಯಾಂಕ್‌ಗೆ ಸಾಲವನ್ನು ಮರುಪಾವತಿ ಮಾಡಬೇಕು. ಅಂದಾಗ ಮಾತ್ರ ಬ್ಯಾಂಕ್ ಪ್ರಗತಿಯಾಗುವದು, ಜೊತೆಗೆ ಇನ್ನೊಬ್ಬರಿಗೆ ಸಾಲ ನೀಡಲು ಅನುಕೂಲವಾಗುವದು ಎಂದರು.

ಬ್ಯಾಂಕ್‌ಗೆ 5,635 ಜನ ಸದಸ್ಯರಿದ್ದು 300.63 ಲಕ್ಷ ರೂ. ಶೇರು ಬಂಡವಾಳ, 7908.65 ಲಕ್ಷ ರೂ.ಠೇವು ಹೊಂದಿದ್ದು ಠೇವುಗಳ ಮೇಲೆ ವಿಮಾ ನಿಗಮದ ವಿಮಾ ಭದ್ರತೆ ಇದೆ. ದುಡಿಯುವ ಬಂಡವಾಳ 9204.75 ಲಕ್ಷ ರೂ. ಆಗಿದೆ. ಬ್ಯಾಂಕ್ ಪ್ರಸಕ್ತ ಸಾಲಿನಲ್ಲಿ 107.32 ಲಕ್ಷ ರೂ. ಲಾಭಗಳಿಸಿದ್ದು ಶೇರುದಾರರಿಗೆ ಶೇ. 12 ರಷ್ಟು ಡಿವ್ಹಿಡೆಂಡ್ ನೀಡಲಿದೆ ಎಂದರು.]

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಡಾ.ಅವಿನಾಶ ಓದುಗೌಡರ ಮಾತನಾಡಿ, ಜನರು ಹಣ ಮತ್ತು ಆರೋಗ್ಯವನ್ನು ಸರಿಯಾಗಿ ಕಾಯ್ದುಕೊಳ್ಳಬೇಕು. ಆರೋಗ್ಯ ಸರಿಯಾಗಿದ್ದರೆ ಹಣ, ಹಣ ಇದ್ದರೂ ಆರೋಗ್ಯ ಸರಿಯಾಗಿಲ್ಲದಿದ್ದರೆ ಆ ಹಣ ವ್ಯರ್ಥವಾಗಿ ಖರ್ಚಾಗುವದು. ಹಣ-ಆರೋಗ್ಯ ಎರಡನ್ನೂ ಸರಿಯಾಗಿ ನಿಭಾಯಿಸಬೇಕೆಂದರು.



ಆಂಗ್ಲೋ ಉರ್ದು ಪಿಯು ಕಾಲೇಜಿನ ಪ್ರಾಚಾರ್ಯ ದಿ.ಎ.ಬಿ. ಖಾಜಿ ಅವರ ನಿಧನಕ್ಕೆ ಸಂತಾಪ ಸೂಚಿಸಲಾಯಿತು. ಸಮಾರಂಭದಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳಾದ ಸಮೃದ್ಧಿ ಶಿದ್ಲಿಂಗ್, ಸಂಜಿದಾ ರಾಮದುರ್ಗ, ಶಾಕೀರಾ ಶಿರಗುಂಪಿ, ರುಕ್‌ಸಾರ್ ಕೊಪ್ಪಳ, ಶಬನಮ್ ಹೊಂಬಳ, ನಫೀಸಾ ಯರಗುಡಿ, ಅಮೀನಾ ಬಾಗಲಿ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಮ್ಯಾನೇಜಿಂಗ್ ಡೈರೆಕ್ಟರ್ ಎ.ಜಿ. ಯರಗುಡಿ ಸ್ವಾಗತಿಸಿ ಸಭೆಯ ವಿಷಯ ಮಂಡಿಸಿದರು. ಶಾಖಾ ವ್ಯವಸ್ಥಾಪಕ ಆರ್.ಎಂ. ನದಾಫ್ ಲೆಕ್ಕಪರಿಶೋಧನಾ ವರದಿ ಪ್ರಸ್ತುತಪಡಿಸಿದರು. ಬ್ಯಾಂಕ್‌ನ ನಿರ್ದೇಶಕರಾದ ಎಂ.ಎ. ಹಣಗಿ ನಿವ್ವಳ ಲಾಭ ಹಂಚಿಕೆ ವಿವರಣೆ ನೀಡಿದರು. ಪ್ರಧಾನ ಕಚೇರಿಯ ವ್ಯವಸ್ಥಾಪಕ ಯಾಸೀನ ಹುಬ್ಬಳ್ಳಿ ವಾರ್ಷಿಕ ಬಜೆಟ್ ಮಂಡಿಸಿ ಎಲ್ಲ ವಿಷಯಗಳಿಗೆ ಸರ್ವಾನುಮತದಿಂದ ಮಂಜೂರು ಪಡೆದರು.

ವೇದಿಕೆಯ ಮೇಲೆ ಬ್ಯಾಂಕಿನ ಉಪಾಧ್ಯಕ್ಷ ಹುಲಗಣ್ಣ ಬಳ್ಳಾರಿ, ನಿರ್ದೇಶಕರಾದ ಎನ್.ಬಿ. ಶಾಸ್ತ್ರಿ, ಎಂ.ಎಂ. ಶೇಖ, ಆರ್.ಎಲ್. ಬಾಗಲಕೋಟ, ಮಹ್ಮದ ಇಕ್ಬಾಲ್ ಹಣಗಿ, ಗುಲ್ಜಚಾರ್‌ಭಾನು ಮುಜಾವರ, ಯಲ್ಲಪ್ಪ ತೆ-ೀಟದ, ಕೌಶಲ್ಯಬಾಯಿ ಕಲಾಲ, ಶಾನವಾಜ ಉಮಚಗಿ, ಬಿ.ಎಸ್. ಢಾಲಾಯತ, ಡಿ.ಜಿ. ರೆಹೀಮಾನ ಉಪಸ್ಥಿತರಿದ್ದರು. ಮೌಲಾನಾ ಖುರಾನ ಪಠಿಸಿದರು, ಪ್ರಾಚಾರ್ಯ ಎಂ.ಎಂ. ಶಿರಹಟ್ಟಿ ಪರಿಚಯಿಸಿ ನಿರೂಪಿಸಿದರು. ಯಾಸಿನ್ ಹುಬ್ಬಳ್ಳಿ ವಂದಿಸಿದರು.

ಸಭೆಯಲ್ಲಿ ಶರಣಪ್ಪ ಹೊಸಮನಿ, ಡಾ. ನಂದಗೌಡ್ರ ಬಿರಾದಾರ, ಡಾ. ಪ್ಯಾರಅಲಿ ನೂರಾನಿ, ಎ.ಎಂ. ಮುಲ್ಲಾ, ಶರಣಬಸಪ್ಪ ಗುಡಿಮನಿ, ಎಸ್.ಎ. ಬಿಜಾಪೂರ, ಮಂಜುರಹುಸೇನ ಗುಳೇದಗುಡ್ಡ, ಎಂ.ಎಚ್. ಜಕ್ಕಲಿ ಸೇರಿದಂತೆ ಶೇರುದಾರರು, ಗಣ್ಯರು ಪಾಲ್ಗೊಂಡಿದ್ದರು.

## ವೀರಶೈವ ಧರ್ಮ ಸರ್ವರಿಗೂ ಒಳಿತನ್ನೇ ಬಯಸಿದೆ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವೀರಶೈವ ಧರ್ಮ ಸರ್ವರಿಗೂ ಒಳಿತನ್ನೇ ಬಯಸುತ್ತ ಬಂದಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಅಹಿಂಸಾದಿ ದಶಧರ್ಮ ಸೂತ್ರಗಳನ್ನು ಬೋಧಿಸಿ ಮಾನವ ಜನಾಂಗವನ್ನು ಉದ್ಧರಿಸಿದ್ದಾರೆ ಎಂದು ಬಾಳೆಹೊನ್ನೂರು ಶ್ರೀರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಭಾರತ ನಗರದಲ್ಲಿ ಸಮಸ್ತ ವೀರಶೈವ ಲಿಂಗವಂತ ಸಮಾಜ ಆಯೋಜಿಸಿದ್ದ ಇಷ್ಟಲಿಂಗಪೂಜೆ ಹಾಗೂ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡುತ್ತಿದ್ದರು.

ಜಾತಿಗಿಂತ ನೀತಿ, ತತ್ವಕ್ಕಿಂತ ಆಚರಣೆ, ಮಾತಿಗಿಂತ ಕೃತಿ, ಬೋಧನೆಗಿಂತ ಸಾಧನೆ, ದಾನಕ್ಕಿಂತ ದಾಸೋಹ, ಚರಿತ್ರೆಗಿಂತ ಚಾರಿತ್ರ್ಯಕ್ಕೆ ಒತ್ತುಕೊಟ್ಟಿದ್ದು ವೀರಶೈವ ಧರ್ಮ. ಧರ್ಮ ಪ್ರಧಾನವಾದ ಭಾರತ ದೇಶದಲ್ಲಿ ಹಲವಾರು ಧರ್ಮಗಳು, ಪರಂಪರೆಗಳು ಬೆರೆತುಕೊಂಡು ಬಂದಿದ್ದರೂ ಸರ್ವರಿಗೂ ಒಳಿತನ್ನು ಬಯಸುವುದೇ ಅವೆಲ್ಲವುಗಳ ಗುರಿಯಾಗಿದೆ. ಮಾನವ ಜನ್ಮದ ಉನ್ನತಿ ಮತ್ತು ಶ್ರೇಯಸ್ಸಿಗೆ ಧರ್ಮವೇ ಮೂಲ. ಜಾತಿ ಧರ್ಮದ ಹೆಸರಿನಲ್ಲಿ ದ್ವೇಷ ಭಾವನೆ ಬೆಳೆಯಬಾರದು. ವೈಚಾರಿಕತೆ ಹೆಸರಿನಲ್ಲಿ ಧರ್ಮ-ಸಂಸ್ಕೃತಿ ನಾಶವಾಗಬಾರದು ಎಂದರು.

ಸಮಾರಂಭದಲ್ಲಿ ತಾವರೆಕೆರೆ ಶಿಲಾಮಠದ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು ಉಪದೇಶಾಮೃತ ನೀಡಿದರು. ಎಡೆಯೂರು, ಸಿದ್ಧರಬೆಟ್ಟ, ದೊಡ್ಡಗುಣಿ, ಸಂಗೊಳ್ಳಿ ಮಠದ ಶ್ರೀಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಹಿರಿಯ ಚಿತ್ರನಟ ದೊಡ್ಡಣ್ಣ, ನಾಟಕ ಅಕಾಡೆಮಿ ಅಧ್ಯಕ್ಷ ಕೆ.ವಿ. ನಾಗರಾಜಮೂರ್ತಿ, ಎಸ್‌ಜೆಆರ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ಯು.ಎಂ. ಬಸವರಾಜ್, ಆರ್.ವಿ. ಭದ್ರಯ್ಯ, ಗ್ರಂಥಿಗೆ ಭಂಡಾರದ ಆರ್.ಬಿ. ಬಸವರಾಜ್, ಬೀರೂರು ಶಿವಸ್ವಾಮಿ, ಗಾನಸುಧೆ ಮುಖ್ಯಸ್ಥ ಶಿವಶಂಕರ ಶಾಸ್ತ್ರಿ ಮತ್ತಿತರರು ಪಾಲ್ಗೊಂಡಿದ್ದರು.



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಲಾಚೇತನ ಸಾಂಸ್ಕೃತಿಕ ಆಕಾಡೆಮಿ ಆಯೋಜಿಸಿದ್ದ 'ಯಕ್ಷ ಸಂಭ್ರಮ' ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಪ್ರಸಿದ್ಧ ತಾಳ ಮದ್ದಲೆ ಕಲಾವಿದರಾದ ಮೋಹನ ಭಾಸ್ಕರ ಹೆಗಡೆ ಉದ್ಘಾಟಿಸಿದರು. ಕಲಾಚೇತನ ಪ್ರಶಸ್ತಿಗೆ ಭಾಜನರಾದ ಖ್ಯಾತ ಚಲನಚಿತ್ರ ನಟರಾದ ರಾಮಕೃಷ್ಣ ನೀರ್ನಳ್ಳಿ, ಡಾ.ಜಿ.ಬಿ ಬಿಡಿನಹಾಳ, ರಾಘವೇಂದ್ರ ಮಯ್ಯ, ಅತಿಥಿಗಳಾದ ಪ್ರೊ.ಎಸ್.ಎಸ್ ಪಟ್ಟಣಶೆಟ್ಟರ, ಕಲಾಚೇತನ ಅಧ್ಯಕ್ಷರಾದ ಡಾ.ಕಾವೆಂಶ್ರೀ ಸೇರಿದಂತೆ ಕಲಾಚೇತನದ ಸದಸ್ಯರು ಹಾಗೂ ಕಲಾಸಕ್ತರು ಹಾಜರಿದ್ದರು.

### ಸಂಪೂರ್ಣ ಹಾಳಾದ ಲಕ್ಷ್ಮೇಶ್ವರ ಯಳವತ್ತಿ ರಸ್ತೆ । ಕೃಷಿ ಚಟುವಟಿಕೆಗಳಿಗೆ ತೊಡಕು

# ಆಡಳಿತದ ವಿರುದ್ಧ ರೈತರ ಆಕ್ರೋಶ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ನೂರಾರು ರೈತರ ಸಾವಿರಾರು ಎಕರೆ ಜಮೀನುಗಳಿಗೆ ಹೋಗುವ ಲಕ್ಷ್ಮೇಶ್ವರ-ಯಳವತ್ತಿ ರಸ್ತೆ ಸಂಪೂರ್ಣ ಹಾಳಾಗಿ ತಮ್ಮ ಜಮೀನುಗಳಿಗೆ ಹೋಗಲಾರದ ಸ್ಥಿತಿ ನಿರ್ಮಾಣವಾಗಿದ್ದು, ದಿಕ್ಕು ತೋಚದಂತಾಗಿ ಆಕ್ರೋಶಗೊಂಡ ಅನೇಕ ರೈತರು ಭಾನುವಾರ ಸರಕಾರ, ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ವಿರುದ್ಧ ಹರಿಹಾಯ್ದರು.

ಕಳೆದ ವರ್ಷ ಬರಗಾಲದಿಂದ ಕಷ್ಟದಲ್ಲಿರುವ ರೈತರು ಈ ವರ್ಷ ಕಷ್ಟಪಟ್ಟು ಬಿತ್ತನೆ ಮಾಡಿದ್ದಾರೆ. ರಸ್ತೆ ಪರಿಸ್ಥಿತಿ ಅಯೋಮಯವಾಗಿದ್ದರಿಂದ ಕಳೆ ತೆಗೆಯಲು, ಯಡೆ ಹೊಡೆಯಲು, ಕ್ರಿಮಿನಾಶ ಸಿಂಪಡಿಸಲು ಸೇರಿ ಕೃಷಿ ಚಟುವಟಿಕೆಗಳಿಗೆ ತೆರಳಲಾಗದೇ ಬೆಳೆಗಳು ಹಾಳಾಗುತ್ತಿವೆ. ರಾಮಣ್ಣ ಲಮಾಣಿ ಶಾಸಕರಾಗಿದ್ದ ವೇಳೆ ಈ ರಸ್ತೆಯನ್ನು ಒಂದಷ್ಟು ದುರಸ್ಥಿಗೊಳಿಸಲಾಗಿತ್ತು. ತಾಲೂಕಿನಲ್ಲಿನ ಬಹುತೇಕ ಗ್ರಾಮೀಣ ಭಾಗದ ರಸ್ತೆಗಳು ಹಾಳಾಗಿದ್ದು, ಈ ಭಾಗದ ಶಾಸಕರು, ಅಧಿಕಾರಿಗಳು ತಾತ್ಕಾಲಿಕ ರಸ್ತೆಯನ್ನಾದರೂ ನಿರ್ಮಿಸಿ ರೈತರಿಗೆ ಅನುಕೂಲ ಮಾಡಿಕೊಡಬೇಕು.

– ಮಂಜುನಾಥ ಮಾಗಡಿ.
ರೈತ ಮುಖಂಡರು.



ಅತ್ಯಂತ ಕಡಿದಾದ ರಸ್ತೆ, ರಸ್ತೆಯುದ್ದಕ್ಕೂ ಮುಳ್ಳುಕಂಟಿಗಳು, ರಸ್ತೆ ಮಧ್ಯೆ ವಿದ್ಯುತ್ ಕಂಬಗಳು, ರಸ್ತೆಗೆ ಅಡ್ಡಲಾಗಿ ಹಾಕಿರುವ ಕಿರು ಸೇತುವೆ ಪೈಪ್‌ಗಳು ಕಿತ್ತು ಅಲ್ಲಲ್ಲಿ ಕೊರಕಲುಂಟಾಗಿವೆ. ಮಳೆಯಿಂದಾಗಿ ರಸ್ತೆ ಸಂಪೂರ್ಣ ಕೆಸರಿನಿಂದ ಕೂಡಿ ಕಳೆದ 1 ತಿಂಗಳಿಂದ ಈ ರಸ್ತೆಯಲ್ಲಿ ಎತ್ತು-ಚಕ್ಕಡಿ, ಟ್ರ್ಯಾಕ್ಟರ್, ಬೈಕ್ ಹೋಗದಂತಾಗಿವೆ. ರವಿವಾರ ತೀರಾ ಅನಿವಾರ್ಯ ಸಂದರ್ಭದಲ್ಲಿ ಈ ರಸ್ತೆಯಲ್ಲಿ ಚಕ್ಕಡಿ ಹೋಗಲಾಗದೇ ರಸ್ತೆ ಪಕ್ಕದ ಗುಂಡಿಗೆ ಬಿದ್ದಿದ್ದನ್ನು ಗಮನಿಸಿ ರೈತರು ಧಾವಿಸಿ ರಕ್ಷಣೆ ಮಾಡಿದ್ದರಿಂದ ಎತ್ತು ಮತ್ತು ರೈತ ಅಪಾಯದಿಂದ ಪಾರಾಗಿದ್ದಾರೆ. ಈ ವೇಳೆ ಸೇರಿದ ರೈತರು ತಮ್ಮ ಆಕ್ರೋಶ ವ್ಯಕ್ತಪಡಿಸಿ ವರ್ಷದುದ್ದಕ್ಕೂ ಈ ಭಾಗದ ರೈತರು ಕಷ್ಟ ಅನುಭವಿಸುವುದು ತಪ್ಪುತ್ತಿಲ್ಲ. ಕಳೆದ ವರ್ಷ ಇದೇ ದಾರಿಯಲ್ಲಿ ಟ್ರ್ಯಾಕ್ಟರ್ ಬಿದ್ದು ಗೊಜನೂರಿನ ರೈತ ಯುವಕನೋರ್ವ ಮೃತಪಟ್ಟಿದ್ದಾನೆ.

ಪದೇ ಪದೇ ಅನಾಹುತಗಳು ಸಂಭವಿಸುತ್ತಲೇ ಇದ್ದು ಮಳೆಗಾಲದಲ್ಲಂತೂ ರೈತರ ಪರಿಸ್ಥಿತಿ ಹೇಳತೀರದಾಗಿದೆ. ಜಮೀನಿನಲ್ಲಿ ಕೃಷಿ ಚಟುವಟಿಕೆ ಮಾಡಲಾಗುತ್ತಿಲ್ಲ. ಬೆಳೆಗಿಂತ ಕಳೆಯೇ ಹೆಚ್ಚಾಗಿದ್ದು ಅನೇಕ ರೈತರ ಜಮೀನುಗಳು ಪಾಳು ಬಿದ್ದಿವೆ. ಈ ಬಗ್ಗೆ ಜನಪ್ರತಿನಿಧಿಗಳು, ಅಧಿಕಾರಿಗಳನ್ನು ಕೇಳಿದರೆ ಜಾರಿಕೊಳ್ಳುತ್ತಿದ್ದಾರೆ. 15/20 ದಿನಗಳಲ್ಲಿ ಹೆಸರು, ಶೇಂಗಾ ಫಸಲು ಕಟಾವಿಗೆ ಬರುತ್ತವೆ. ಆದ್ದರಿಂದ ಸ್ಥಳೀಯ ಶಾಸಕರು, ಸಂಸದರು, ಅಧಿಕಾರಿಗಳು ಇತ್ತ ಗಮನ ಹರಿಸಬೇಕು ಎಂದು ರೈತರು ಆಗ್ರಹಿಸಿದರು.

ಈ ವೇಳೆ ರೈತ ಮುಖಂಡರಾದ ಡಿ.ಬಿ. ಬಳಿಗಾರ, ಸುಭಾನ ಹೊಂಬಾಳ, ಮಹಾದೇವಪ್ಪ ಅಂದಲಗಿ, ನಿಂಗಪ್ಪ ಮುಳಗುಂದ, ಸಂತೋಷ ಕಾಶೆಟ್ಟಿ, ರಾಮಣ್ಣ ಮುಳಗುಂದ, ಹನೀಫಸಾಬ್ ಸೂರಣಗಿ, ಪಕ್ಕಿರಪ್ಪ ಉಮಚಗಿ, ಮಹಾದೇವಪ್ಪ ಉಮಚಗಿ, ಮಲ್ಲಪ್ಪ ಉಮಚಗಿ, ಶೇಕಪ್ಪ, ಶಿವನಗೌಡ ಪಾಣಿಗಟ್ಟಿ, ಪ್ರಶಾಂತ ಉಮಚಗಿ, ರಬ್ಬನಿಸಾಬ್ ಸೂರಣಗಿ, ನಜೀರಾ ಸೂರಣಗಿ, ರಾಜು ಉಮಚಗಿ ಸೇರಿ ಅನೇಕ ರೈತರಿದ್ದರು



VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka